# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 102 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 31–10–2023 ಮಂಗಳವಾರ ಪುಟ: 4 ಬೆಲೆ : ರೂ.2–00
Volume - 01 Issue - 102 Title- Code: KARKAN 28269 Chitradurga Date: 31-10-2023 Tuesday Page: 4 Price: Rs. 2-00



ಒಳಪುಟದ ಸುದ್ದಿಗಳು

ಜಿಲ್ಲಾಸ್ಪತ್ರೆಗೆ ಅಗತ್ಯ ಸೌಲಭ್ಯಗಳ ಪಟ್ಟಿ ತಯಾರಿಸಿ: ಉಸ್ತುವಾರಿ ಸಚಿವ ಡಿ.ಸುಧಾಕರ್ 2

ನಾಡಿನ ಭವ್ಯತೆ ಅಳತೆ ಮಾಡುವಂತದ್ದು ಹಣ, ಆಸ್ತಿ, ಅಂತಸ್ತು, ಕಟ್ಟಡದಿಂದಲ್ಲ 3

ಗೌರಸಮುದ್ರ ಜಿಸಾಕಿದ ಅನ್ನತಿಂದು 17 ಮೇಕೆ ಸಾವು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನ.1 ರಂದು ಕನ್ನಡ ರಾಜ್ಯೋತ್ಸವ




» **ಚಿತ್ರದುರ್ಗ**

ಜಿಲ್ಲಾಡಳಿತದ ವತಿಯಿಂದ ನವಂಬರ್ 1ರಂದು ಬೆಳಿಗ್ಗೆ 9ಕ್ಕೆ ಚಿತ್ರದುರ್ಗ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ರಾಷ್ಟ್ರ ಧ್ವಜಾರೋಹಣ ಮತ್ತು ರಾಜ್ಯೋತ್ಸವ ಸಂದೇಶ ನೀಡುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಮುಖ್ಯ ಅತಿಥಿಗಳಾಗಿ ಶಾಸಕರಾದ ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ಬಿ.ಜಿ. ಗೋವಿಂದಪ್ಪ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್ ಭಾಗವಹಿಸುವರು. ಕನ್ನಡ ರಾಜ್ಯೋತ್ಸವ ಅಂಗವಾಗಿ ಅಂದು ಬೆಳಿಗ್ಗೆ 7ಕ್ಕೆ ನಗರದ ನೀಲಕಂಠೇಶ್ವರ ದೇವಸ್ಥಾನದಿಂದ ಭುವನೇಶ್ವರಿ ಭಾವಚಿತ್ರ, ಕಲಾತಂಡಗಳು ಹಾಗೂ ಸ್ತಬ್ಧಚಿತ್ರಗಳೊಂದಿಗೆ ಪೊಲೀಸ್ ಕವಾಯತು ಮೈದಾನದವರಗೆ ಮೆರವಣಿಗೆ ನಡೆಯಲಿದೆ.ಅಂದು ಸಂಜೆ 6ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

### ಇಂದು ಆಯುಷ್ಮಾನ್ ಆರೋಗ್ಯ ಮೇಳ

» **ಚಿತ್ರದುರ್ಗ**

ಆಯುಷ್ಮಾನ್ ಭವ ಕಾರ್ಯಕ್ರಮದ ಅಡಿಯಲ್ಲಿ ಜಿಲ್ಲೆಯ ಎಲ್ಲಾ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಅಕ್ಟೋಬರ್ 31ರಂದು ವಿಶೇಷ ಆರೋಗ್ಯ ಮೇಳಗಳು ನಡೆಯಲಿವೆ. ಜಿಲ್ಲೆಯ ಸಮುದಾಯ ಆರೋಗ್ಯ ಕೇಂದ್ರಗಳಾದ ಭರಮಸಾಗರ, ಸಿರಿಗೆರೆ, ಬಿ. ದುರ್ಗ, ಬೆಲಗೂರು, ಕಿಟ್ಟದಾಳ್ ಕಂಚಿಪುರ ಶ್ರೀರಾಂಪುರ, ಧರ್ಮಪುರ, ಮರಡಿಹಳ್ಳಿ, ನಾಯಕನಹಟ್ಟಿ, ಪರಶುರಾಮಪುರ ಮತ್ತು ರಾಂಪುರ ಆಸ್ಪತ್ರೆಗಳಲ್ಲಿ ಕಣ್ಣಿನ ಪರೀಕ್ಷೆ ಮತ್ತು ದಂತ ಪರೀಕ್ಷಾ ಸೇವೆಗಳ ಬಗ್ಗೆ ವಿಶೇಷ ಆರೋಗ್ಯ ಮೇಳಗಳು ನಡೆಯಲಿವೆ.

# ಸ್ಫೂರ್ತಿದಾಯಕ ಆಡಳಿತ ನೀಡಲು ಸರ್ಕಾರ ಬದ್ಧ: ಶಾಸಕ ಗೋವಿಂದಪ್ಪ


» **ಹೊಸದುರ್ಗ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 5 ತಿಂಗಳಾಗಿದ್ದು, ಜನರ ನಿರೀಕ್ಷೆಯಂತೆಯೇಕೆಲಸಮಾಡಲಾಗುತ್ತಿದೆ. ಹಿಂದಿನ ಬಿಜೆಪಿ ಸರ್ಕಾರದ ಆಡಳಿತ, ಅಭಿವೃದ್ಧಿ, ಸರ್ಕಾರದ ನಡಾವಳಿಯನ್ನು ಜನರು ಬದಲಾವಣೆ ಮಾಡಿ, ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ನೀಡಿದ್ದಾರೆ. ಜನರ ಆಶಯದಂತೆ ಕಾಂಗ್ರೆಸ್ ಸರ್ಕಾರ ಸ್ಫೂರ್ತಿದಾಯಕ ಆಡಳಿತ ನೀಡಲಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಸೋಮವಾರ ಜಿಲ್ಲಾಡಳಿತ ಮತ್ತು ತಾಲೂಕು ಆಡಳಿತ ಇವರ ಸಹಯೋಗದೊಂದಿಗೆ ಆಯೋಜಿಸಿದ್ದ ಜನತಾದರ್ಶನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜನರು ತಮ್ಮ ಕೆಲಸಗಳಿಗಾಗಿ ಅರ್ಜಿ ಹಿಡಿದು ಟೇಬಲ್ ಗಳಿಗೆ ಅಲೆದಾಡುವುದನ್ನು ತಪ್ಪಿಸಲು ಕಂದಾಯ ಇಲಾಖೆ ಇ– ಆಫೀಸ್ ತೆರೆದಿದೆ. ಕಂದಾಯ ಇಲಾಖೆಯಲ್ಲಿ ಸಮಗ್ರ ಬದಲಾವಣೆ ತರಲು ಹಾಗೂ ಜನರ ಸಮಸ್ಯೆಗಳಿಗೆ ತಕ್ಷಣವೇ ಪರಿಹಾರ ಕಂಡುಕೊಳ್ಳಲು ಇದು ನೆರವಾಗಲಿದೆ. ಇನ್ನೂ ಮುಂದೆ ಎಲ್ಲವೂ ಇ– ಆಡಳಿತದ ಮೂಲಕವೇ ನಡೆಯುತ್ತದೆ. ಇಂತಹ ಹೊಸ ಬದಲಾವಣೆಯನ್ನು ನಮ್ಮ ಸರ್ಕಾರ ತಂದಿದೆ. ಜನರ ಸಮಸ್ಯೆಗಳನ್ನು ಪರಿಹರಿಸಲು ವಿಶ್ವವಿದ್ಯಾಲಯಗಳಲ್ಲಿ ಪಿಎಚ್ ಡಿ ಪದವಿ ಪಡೆಯಬೇಕಿಲ್ಲ. ಜನರೇ ದೊಡ್ಡ ವಿಶ್ವವಿದ್ಯಾಲಯವಿದ್ದಂತೆ. ಸದಾ ಅವರ ಸಮಸ್ಯೆಗಳನ್ನು ಆಲಿಸುತ್ತಿದ್ದರೆ, ಪರಿಹಾರ ಕ್ರಮಗಳು ಕೂಡ ಸಿಗುತ್ತವೆ ಎಂದು ಅಧಿಕಾರಿಗಳಿಗೆ ಸಲಹೆ ನೀಡಿದರು.

**ಮಧ್ಯವರ್ತಿಗಳಿಂದ ದೂರವಿರಿ:** ಬಗರ್ ಹುಕ್ಕುಂ ಜಮೀನು ಸಾಗುವಳಿ ಮಾಡಿ, ಅರ್ಜಿಗಳನ್ನು ಸಲ್ಲಿಸಿರುವವರು ಸಾಗುವಳಿ ಪತ್ರಗಳನ್ನು ಪಡೆಯಲು ಮಧ್ಯವರ್ತಿಗಳನ್ನು ಇಟ್ಟುಕೊಂಡು ಹಣ ಖರ್ಚು ಮಾಡಿಕೊಂಡು ಇಲಾಖೆಗಳಿಗೆ ಅಲೆದಾಡಬೇಡಿ. ಕಂದಾಯ ಇಲಾಖೆ ಅಧಿಕಾರಿಗಳೇ ಸ್ವತಃ ಜಮೀನುಗಳಿಗೆ ಬಂದು ಅರ್ಹ ಫಲಾನುಭವಿಗಳನ್ನು ಗುರುತಿಸಿ ಸಾಗುವಳಿ ಹಕ್ಕು ಪತ್ರ ನೀಡುತ್ತಾರೆ. ಅರ್ಹರಿಗೆ ಹಕ್ಕು ಪತ್ರ ಕೊಡಿಸುವ ಜವಾಬ್ದಾರಿಯು ಕೂಡ ನಮ್ಮದಾಗಿದ್ದು, ಮಧ್ಯವರ್ತಿಗಳಿಂದ ದೂರವಿರಿ ಎಂದರು.



### 101 ಕೆರೆಗಳಿಗೆ ಹರಿಯಲಿರುವ ಭದ್ರಾ ನೀರು

ನಮ್ಮ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಬಹಳ ಚುರುಕಾಗಿ ನಡೆಯುತ್ತಿದೆ. ಚಿತ್ರದುರ್ಗ ನಾಲೆಯಲ್ಲಿ 800 ಮೀಟರ್ ಕೆಲಸ ಬಾಕಿ ಇದ್ದು, ಶೀಘ್ರವೇ ಪೂರ್ಣಗೊಳ್ಳಲಿದೆ. ತುರ್ತಾಗಿ ತುಮಕೂರು ನಾಲೆ ಕಾಮಗಾರಿಯಾಗಬೇಕಿದೆ. ಇದರಿಂದಾಗಿ ಹೊಸದುರ್ಗ ತಾಲೂಕಿನ 1.ಲಕ್ಷದ 30.ಸಾವಿರ ಹೆಕ್ಟರ್ ಗೆ ನೀರುಹರಿಸುವ ಕೆಲಸವಾಗಬೇಕು. ಆದಾಗ ಜನರ ಬಡತನ, ಬರ, ಕಷ್ಟ ನಿವಾರಣೆಯಾಗುತ್ತದೆ. ಭದ್ರಾ ಮೇಲ್ದಂಡೆ ಯೋಜನೆಯಿಂದ ತಾಲೂಕಿನ 360 ಹಳ್ಳಿಗಳಿಗೆ ಕುಡಿಯಲು ನೀರು ಕೊಡಲಾಗುವುದು. ಈಗಾಗಲೇ ಈ ಕಾಮಗಾರಿ ಕಸಬಾ ಮತ್ತು ಮಾಡದಕೆರೆ ಹೋಬಳಿ ವ್ಯಾಪ್ತಿಯಲ್ಲಿ ನಡೆಯುತ್ತಿದ್ದು, ಮಾರ್ಚ್ ತಿಂಗಳ ಒಳಗೆ ಪೂರ್ಣಗೊಳ್ಳಲಿದೆ. ಹಾಗೆಯೇ ತಾಲೂಕಿನ 101 ಕೆರೆಗಳಿಗೆ ಭದ್ರಾ ನೀರು ಹರಿಸಲಾಗುವುದು.

» **ಬಿ.ಜಿ ಗೋವಿಂದಪ್ಪ. ಶಾಸಕರು, ಹೊಸದುರ್ಗ**

**ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ:** ಪ್ರಸ್ತುತ ವರ್ಷದಲ್ಲಿ ಬರಗಾಲದ ಪರಿಸ್ಥಿತಿ ತಲೆದೂರಿರುವುದರಿಂದ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗುವ ಸಾಧ್ಯತೆಯಿದೆ. ಹಾಗಾಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನಿತ್ಯ ಆಫೀಸಲ್ಲಿರಬೇಕು. ನೀರಿನ ಸಮಸ್ಯೆ ಇರುವ ಹಳ್ಳಿಗಳಿಗೆ ತ್ವರಿತವಾಗಿ ನೀರನ್ನು ಒದಗಿಸುವ ಕೆಲಸ ಮಾಡಬೇಕು. ಕೆಲವು ಗ್ರಾಮಗಳಲ್ಲಿ ಹಗಲು ಸಮಯದಲ್ಲಿಯೇ ಬೀದಿ ದೀಪಗಳು ಹತ್ತಿ ಉರಿಯುತ್ತವೆ. ಬೆಳಿಗ್ಗೆಯ ಸಮಯದಲ್ಲಿ ವಿದ್ಯುತ್ ದೀಪಗಳನ್ನು ಆರಿಸಬೇಕು. ಚರಂಡಿಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಜನರಿಗೆ ಆರೋಗ್ಯ ಸಮಸ್ಯೆಯಾಗದಂತೆ ಎಚ್ಚರಿಕೆಯಿಂದ ಸುರಕ್ಷತ ಕ್ರಮಗಳನ್ನು ಕೈಗೊಳ್ಳಬೇಕು. ಗ್ರಾ.ಪಂ ಕೇಂದ್ರ ಸ್ಥಾನದಲ್ಲಿರುವ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಿದರೆ, ಜನರು ತಾಲೂಕು ಮತ್ತು ಜಿಲ್ಲಾಡಳಿತದ ಬಳಿ ಹೋಗುವುದು ತಪ್ಪುತ್ತದೆ. ಗ್ರಾಮೀಣ ಭಾಗದಲ್ಲಿರುವ ಅಧಿಕಾರಿಗಳು ಜವಾಬ್ದಾರಿ ಅರಿತು ಕೆಲಸ ಮಾಡಿ ಎಂದು ಸೂಚನೆ ನೀಡಿದರು.

**ಪ್ರತಿ ಮಂಗಳವಾರ ಗ್ರಾ.ಪಂ ನಲ್ಲಿ ಜನತಾ ದರ್ಶನ:** ಸರ್ಕಾರ ಹೇಗೆ ಜಿಲ್ಲಾಡಳಿತವನ್ನು ತಾಲೂಕಿನ ಬಾಗಿಲಿಗೆ ಕಳಿಸುತ್ತಿದೆಯೋ, ಆದೇ ಮಾದರಿಯಲ್ಲಿ ತಾಲೂಕು ಆಡಳಿತವನ್ನು ಗ್ರಾಮಗಳಿಗೆ ಕಳಿಸುವ ಕೆಲಸ ನಮ್ಮಲ್ಲಿ ಆಗಲಿದೆ. ವಾರದ ಪ್ರತಿ ಮಂಗಳವಾರ ತಾಲೂಕಿನ ಒಂದು ಗ್ರಾ.ಪಂ ಕೇಂದ್ರ ಸ್ಥಾನದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳ ಸಮ್ಮುಖದಲ್ಲಿ ಜನತಾದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಜನರು ತಮ್ಮ ಸಮಸ್ಯೆಗಳನ್ನು ಮತ್ತು ದೂರುಗಳನ್ನು ಲಿಖಿತ ಅರ್ಜಿಯ ಮೂಲಕ ಸಲ್ಲಿಸಬಹುದು. ಇದರಿಂದಾಗಿ ಜನರು ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಬಹುಹು. ಸ್ಥಳದಲ್ಲಿಯೇ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಈ ಕಾರ್ಯಕ್ರಮ ಸಹಕಾರಿ ಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಪ್ರಸ್ತಾವಿಕವಾಗಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಸರ್ಕಾರ ಜಿಲ್ಲಾಡಳಿತ ತಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ತಾಲೂಕುಗಳಲ್ಲಿ ಜನತಾದರ್ಶನ ಕಾರ್ಯಕ್ರಮವನ್ನು ನಡೆಸಲು ನಿರ್ದೇಶನ ನೀಡಿತ್ತು. ಅದರಂತೆಯೇ ಹೊಸದುರ್ಗದಲ್ಲಿ ಮೊದಲು ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ತಾಲೂಕು ಮಟ್ಟದಲ್ಲಿ ಆಗದಿರುವ ಸಮಸ್ಯೆಗಳನ್ನು ಇಲ್ಲಿಯೇ ಬಗೆಹರಿಸಲು ಹಾಗೂ ಚರ್ಚಿಸಲು ಈ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಇದರಿಂದ ಜನರಿಗೆ ಸಮರ್ಪಕ ಮಾಹಿತಿ ಮತ್ತು ಸರ್ಕಾರದ ಯೋಜನೆಗಳ ಬಗ್ಗೆ ತಿಳಿಸಲು ಸಹಕಾರಿಯಾಗುತ್ತದೆ. ಜನರು ತಮ್ಮ ಸಮಸ್ಯೆಗಳು ಹಾಗೂ ದೂರುಗಳನ್ನು ಲಿಖಿತ ಅರ್ಜಿಗಳ ಮೂಲಕ ಸಂಬಂಧಪಟ್ಟ ಇಲಾಖೆಯ ಕೌಂಟರ್ ಗಳಿಗೆ ನೀಡಬೇಕು. ಅರ್ಜಿ ನೀಡಿದ ಬಳಿಕ ಸ್ವೀಕೃತಿ ಪಡೆಯಬೇಕು. ನಿಮ್ಮ ಸಮಸ್ಯೆಗಳಿಗೆ ಜಿಲ್ಲಾಡಳಿತ ಸ್ಪಂದಿಸಲಿದೆ. ಜನರು ನಿತ್ಯ ಹೋಗು ಇಲಾಖೆಗಳಿಗೆ ಅಲೆದಾಡುವುದನ್ನು ತಪ್ಪಿಸಲು ಈಗಾಗಲೇ ಇ– ಆಫೀಸ್ ತೆರೆಯಲಾಗಿದ್ದು, ಆಡಳಿತವನ್ನು ಸುಲಭವಾಗಿ ನಡೆಸಲು, ಸಮಸ್ಯೆಗಳನ್ನು ಇತ್ಯರ್ಥಪಡಿಸಲು ಇದನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು.

ಈವೇಳೆಕಾರ್ಯಕ್ರಮದಲ್ಲಿಜಿ.ಪಂಸಿಇಓ ಸೋಮಶೇಖರ್, ಉಪವಿಭಾಗಾಧಿಕಾರಿ ಸತೀಶ್ ರೆಡ್ಡಿ, ತಹಶೀಲ್ದಾರ್ ತಿರುಪತಿ ಪಾಟೀಲ್, ನಗಾರಾಭಿವೃದ್ಧಿ ಇಲಾಖೆ ಮಹೇಂದ್ರ ಕುಮಾರ್, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್, ಜಿಲ್ಲಾ ಆರೋಗ್ಯ ಅಧಿಕಾರಿ ರೇಣುಪ್ರಸಾದ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಇಲಾಖೆ ಮಂಜುನಾಥ್, ಪಶುಸಂಗೋಪನೆ ಇಲಾಖೆ ಅಧಿಕಾರಿ ಬಾಬು ರಂಗನಾಥ್, ಜಿಲ್ಲಾ ಪ.ಪಂ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ತಾ.ಪಂ. ಇಓ ಸುನೀಲ್ ಕುಮಾರ್, ಎಇಇ ನಿರಂಜನಮೂರ್ತಿ ಮತ್ತು ಜಿಲ್ಲಾ ಆಯುಷ್ ಅಧಿಕಾರಿ ಚಂದ್ರಕಾಂತ್ ಸೇರಿದಂತೆ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರಿದ್ದರು.

## ಪ್ರಮುಖ ಸುದ್ದಿ

# ಮಾಧ್ಯಮದವರ ಮೇಲೆ ಹಲ್ಲೆ ನೌಕರರ ಸಂಘದ ರಾಜ್ಯಾಧ್ಯಕ್ಷ ಷಡಾಕ್ಷರಿ ಬಂಧಿಸಲು ಒತ್ತಾಯ




» **ಚಿತ್ರದುರ್ಗ**

ಕಳೆದ 27 ರಂದು ತುಮಕೂರಿನಲ್ಲಿ ನಡೆದ ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಕ್ರೀಡಾಪಟುಗಳಿಗೆ ಅವರವರ ಅಳತೆಗೆ ತಕ್ಕಂತೆ ಟೀಶರ್ಟ್ ಮತ್ತು ಇತರೆ ಸಾಮಾಗ್ರಿಗಳನ್ನು ನೀಡುವಲ್ಲಿ ಲೋಪವಾಗಿದ್ದನ್ನು ಪ್ರಶ್ನಿಸುತ್ತಿದ್ದ ಸಂದರ್ಭದಲ್ಲಿ ದೃಶ್ಯ ಹಾಗೂ ಮುದ್ರಣ ಮಾಧ್ಯಮದವರು ನೌಕರರ ಪರ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಷಡಾಕ್ಷರಿ ಇವರನ್ನು ಪ್ರಶ್ನಿಸಿದಾಗ ಹಲ್ಲೆ ನಡೆಸಿರುವುದನ್ನು ವಿರೋಧಿಸಿ ಕರುನಾಡ ವಿಜಯಸೇನೆ ಕಾರ್ಯಕರ್ತರು ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆ ಎದುರು ಪ್ರತಿಭಟನೆ ನಡೆಸಿ ಸುಮೋಟೋ ಕೇಸು ದಾಖಲಿಸಿ ಬಂಧಿಸುವಂತೆ ಒತ್ತಾಯಿಸಿದರು.


ಪುಟ ↘ 2





## ಫಾಸ್ಟ್ ನ್ಯೂಸ್

### ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಯೋಜನೆಯಡಿಯಲ್ಲಿ ಕರ್ನಾಟಕ ರಾಜ್ಯದ ಕ್ರೀಡಾ ಪೋಷಕರನ್ನು ಗುರುತಿಸಿ ಗೌರವಿಸಲು ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಕ್ರೀಡಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ 5 ವರ್ಷಗಳಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಕೊಡುಗೆ ನೀಡಿದ ಕ್ರೀಡಾ ಪೋಷಕರು ಅರ್ಜಿ ಸಲ್ಲಿಸಬಹುದು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಜಿ ಪಡೆದು, ನವೆಂಬರ್ 25 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನೌಕರರ ಸಂಘದ ರಾಜ್ಯಾಧ್ಯಕ್ಷ ಷಡಾಕ್ಷರಿ ಬಂಧಿಸಿ

» **ಮೊದಲ ಪುಟದಿಂದ**

ಮಹಿಳಾ ನೌಕರರು ತಮ್ಮ ತಮ್ಮ ಅಳತೆಗೆ ತಕ್ಕಂತೆ ಟೀಶರ್ಟ್‌ಗಳನ್ನು ನೀಡಿಲ್ಲ ಎಂದು ರಾಜ್ಯಾಧ್ಯಕ್ಷ ಷಡಾಕ್ಷರಿಯನ್ನು ಪ್ರಶ್ನಿಸುತ್ತಿದ್ದ ಸಂದರ್ಭವನ್ನು ಸೆರೆ ಹಿಡಿಯುತ್ತಿದ್ದ ಟಿ.ವಿ.ಮಾಧ್ಯಮ ಹಾಗೂ ಪತ್ರಕರ್ತರನ್ನು ನಿಂಧಿಸಿದ್ದಲ್ಲದೆ ಹಲ್ಲೆ ನಡೆಸಿ ದೌರ್ಜನ್ಯವೆಸಗಿರುವುದು ಅತ್ಯಂತ ಖಂಡನೀಯ. ಹಾಗಾಗಿ ಕೂಡಲೆ ತಮ್ಮ ಸ್ಥಾನಕ್ಕೆ ರಾಜಿನಾಮೆ ನೀಡಬೇಕು. ಚಿತ್ರದುರ್ಗದಲ್ಲಿರುವ ಸರ್ಕಾರಿ ನೌಕರರ ಭವನವನ್ನು ಬಾರ್ ಮತ್ತು ರೆಸ್ಟೋರೆಂಟ್‌ಗೆ ನೀಡಿ ಜಿಲ್ಲೆಯ ಸರ್ಕಾರಿ ನೌಕರರನ್ನು ಅವಮಾನಿಸಲಾಗಿದೆ. ಸರ್ಕಾರ ಇತ್ತ ಗಮನಹರಿಸಿ ನೌಕರರ ಭವನವನ್ನು ಬಾಡಿಗೆ ನೀಡಿರುವುದನ್ನು ಹಿಂದಕ್ಕೆ ಪಡೆದು ನೌಕರರ ಹಿತಕ್ಕೆ ಬಳಸಬೇಕು ಎಂದು ಕೆ.ಟಿ.ಶಿವಕುಮಾರ್ ಆಗ್ರಹಿಸಿದರು.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ದಾವಣಗೆರೆ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತಾಗಿ ನಿರ್ವಹಣಾ ಕಾರ್ಯನಿರ್ವಹಿಸಲು ಹಮ್ಮಿಕೊಂಡಿರುವುದರಿಂದ ಅ.31 ರಂದು ಬೆಳಿಗ್ಗೆ 10 ರಿಂದ ಸಂಜೆ ಸಂಜೆ 5:30 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಎಫ್-17 ಮಹಾನಗರ ಪಾಲಿಕೆ ಫೀಡರ್ ವ್ಯಾಪ್ತಿಯ ಎ.ವಿ.ಕೆ ಕಾಲೇಜ್ ರಸ್ತೆ, ರತ್ನಮ್ಮ ಮಹಿಳಾ ಹಾಸ್ಟೆಲ್, ಸೀತಮ್ಮ ಕಾಲೇಜ್ ಮತ್ತು ಬಡಾವಣೆ ಪೊಲೀಸ್‌ಠಾಣೆ,ಹದಡಿ ರೋಡ್ ಹಾಗೂ ಸುತ್ತ ಮುತ್ತ ಪ್ರದೇಶಗಳು ಎಫ್-14 ಜಯನಗರ ಫೀಡರ್ ವ್ಯಾಪ್ತಿಯ ನಿಟುವಳ್ಳಿ ಹಾಗು ನಿಟುವಳ್ಳಿ ಹೊಸಬಡಾವಣೆ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, 60 ಅಡಿ ರಸ್ತೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳು ಎಫ್-13 ತ್ರಿಶೂಲ್ ಫೀಡರ್ ವ್ಯಾಪ್ತಿಯ ಪಿ ಬಿ ರೋಡ್, ರಿಲಿಯನ್ಸ್ ಮಾರ್ಕೆಟ್, ಸುಲ್ತಾನ್ ಡೈಮೈಂಡ್ಸ್, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಎಫ್-15 ಸ್ವಿಮಿಂಗ್‌ಪೂಲ್ ಫೀಡರ್ ವ್ಯಾಪ್ತಿಯ ಡೆಂಟಲ್ ಕಾಲೇಜ್‌ರಸ್ತೆ, ಮ್ಯಾಕ್ಸ್, ಕೆಎಸ್‌ಪಿ, ಕಡ್ಲಿ ಬಿಲ್ಡಿಂಗ್, ಬಿಎಸ್‌ಸಿ, ಎಆರ್‌ಜಿ ಕಾಲೇಜ್ ಹಾಗೂ ಸುತ್ತಮುತ್ತಲಿನ ಎಫ್-16 ನಿಜಲಿಂಗಪ್ಪ ವ್ಯಾಪ್ತಿಯ ನಿಜಲಿಂಗಪ್ಪ ಬಡಾವಣೆ, ರಿಂಗ್‌ರೋಡ್, ಕುಂದವಾಡರಸ್ತೆ, ಯಲ್ಲಮ್ಮ ನಗರ, ವಿನೋಬನಗರ 4ನೇ ಮೇನ್, 3ನೇ ಮೇನ್ ಹಾಗೂ ಸುತ್ತ ಮುತ್ತಲ ಪ್ರದೇಶಗಳು.ಎಫ್18-ದುರ್ಗಾಂಬಿಕಾ ಫೀಡರ್ ವ್ಯಾಪ್ತಿಯ ಎಮ್.ಬಿ. ಕೇರಿ, ಹೊಂಡದ ಸರ್ಕಲ್, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿ ನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇ.ಡಬ್ಲ್ಯೂ.ಎಸ್. ಕಾಲೋನಿ, ಹಳೇಪೇಟೆ, ಬಾರ್‌ಲೈನ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ಎಫ್-15 ಇಎಸ್‌ಐ ಫೀಡರ್ ವ್ಯಾಪ್ತಿಯ ಇ.ಎಸ್.ಐ ಆಸ್ಪತ್ರೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ಆಕಾಶವಾಣಿಯಲ್ಲಿ ಹೊರನಾಡ ಕನ್ನಡಿಗರ ಕನ್ನಡ ಪ್ರೀತಿ

» **ದಾವಣಗೆರೆ**

ಆಕಾಶವಾಣಿ ಭದ್ರಾವತಿಯಿಂದ ನವಂಬರ್ ತಿಂಗಳ ಪ್ರತಿದಿನ ಬೆಳಿಗ್ಗೆ 9.35 ಗಂಟೆಗೆ ಹೊರನಾಡ ಕನ್ನಡಿಗರ ಕನ್ನಡ ಪ್ರೀತಿ ಕಾರ್ಯಕ್ರಮ ಸರಣಿಯನ್ನು ಆಕಾಶವಾಣಿ ಭದ್ರಾವತಿ ಈಒ103.5 ಹಾಗೂ ಒಫ675ಞಥ ಯಲ್ಲಿ ಪ್ರಸಾರವಾಗಲಿದೆ.ದಾವಣಗೆರೆ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಯ ಹೊರನಾಡ ಕನ್ನಡಿಗರು ಭಾಗವಹಿಸಬಹುದಾಗಿದ್ದು, ತಮ್ಮ ಕನ್ನಡ ಪ್ರೀತಿಯ ಅನಿಸಿಕೆಯ ಧ್ವನಿಮುದ್ರಿಸಿ ಇ-ಮೇಲ್ ವಿಳಾಸ airbdvt@gmail.com ಗೆ ಕಳುಹಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಆಕಾಶವಾಣಿ ಭದ್ರಾವತಿ ಕಾರ್ಯಕ್ರಮ ಮುಖ್ಯಸ್ಥ ಎಸ್.ಆರ್ ಭಟ್ ತಿಳಿಸಿದ್ದಾರೆ.

### ಮೆಸ್ಕಾಂ ಜನ ಸಂಪಕ ಸಭೆ

» **ಶಿವಮೊಗ್ಗ**

ಶಿವಮೊಗಗ ನಗರ ಉಪ ವಿಭಾಗ ವ್ಯಾಪ್ತಿಯಲಿ ಅ.31 ರಂದು ಬೆಳಿಗ್ಗೆ ಗುಡ್‌ಲಕ್ ಸರ್ಕಲ್ ಹತ್ತಿರ, ಎಸ್.ವಿ. ಬಡಾವಣೆ, ಮೆಸ್ಕಾಂ ನಗರ ಕಚೇರಿಯಲ್ಲಿ ಜನ ಸಂಪರ್ಕ ಸಭೆ ನಡೆಯಲಿದೆ.

---

**ಜಿಲ್ಲಾ ಆರೋಗ್ಯ ರಕ್ಷಾ ಸಮಿತಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್**

# ಜಿಲ್ಲಾಸ್ಪತ್ರೆಗೆ ಅಗತ್ಯ ಸೌಲಭ್ಯಗಳ ಪಟ್ಟಿ ತಯಾರಿಸಿ

» **ಚಿತ್ರದುರ್ಗ**

ಸಾರ್ವಜನಿಕರಿಗೆ ಅತ್ಯುತ್ತಮ ಗುಣಮಟ್ಟದ ಚಿಕಿತ್ಸೆ ದೊರಕುವಂತಾಗಲು, ಜಿಲ್ಲಾಸ್ಪತ್ರೆಗೆ ಅವಶ್ಯವಿರುವ ಸೌಲಭ್ಯಗಳ ಪಟ್ಟಿ ತಯಾರಿಸಿ ಮಾಹಿತಿ ನೀಡಬೇಕು. ಈ ಕುರಿತು ಆರೋಗ್ಯ ಸಚಿವರ ಬಳಿ ಚರ್ಚಿಸಿ, ಜಿಲ್ಲಾಸ್ಪತ್ರೆಗೆ ಅತ್ಯಗತ್ಯವಿರುವ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ಇಲ್ಲಿನ ಜಿಲ್ಲಾಸ್ಪತ್ರೆ ಆವರಣದ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಜಿಲ್ಲಾ ಆರೋಗ್ಯ ರಕ್ಷಾ ಸಮಿತಿ ಸರ್ವ ಸದಸ್ಯರ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

250 ಹಾಸಿಗೆ ಸಾಮರ್ಥ್ಯವಿರುವ ಜಿಲ್ಲಾಸ್ಪತ್ರೆಯು 450 ಬೆಡ್‌ಗಳಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಈ ಸಾಮರ್ಥ್ಯಕ್ಕೆ ಅನುಗುಣವಾಗಿ ಸಿಬ್ಬಂದಿ ಹುದ್ದೆಗಳ ಮಾಹಿತಿಯನ್ನು ಸೃಜಿಸಿಕೊಂಡು ಅನುಮೋದನೆ ಪಡೆಯಬೇಕು ಎಂದು ಹೇಳಿದರು.

ಆಸ್ಪತ್ರೆಯಲ್ಲಿ ಹೆಚ್ಚುವರಿಯಾಗಿ ತಲಾ 10 ಜನ ಶುಶ್ರೂಷಕರು, 10 ಜನ



ಗ್ರೂಪ್ "ಡಿ" ಹೊರಗುತ್ತಿಗೆ ನೌಕರರಾಗಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆ ಶೀಘ್ರ ವೇತನ ಬಿಡುಗಡೆ ಮಾಡಬೇಕು. ಸರ್ಕಾರದ ಸುತ್ತೋಲೆ, ಮಾರ್ಗಸೂಚಿ ಅನುಸಾರ ಅನುಮೋದನೆ ಪಡೆದು ಹೊರಗುತ್ತಿಗೆ ನೌಕರರ ಸೇವೆಯನ್ನು ಮುಂದುವರೆಸುವಂತೆಜಿಲ್ಲಾಶಸ್ತ್ರಚಿಕಿತ್ಸಕರಿಗೆ ಸೂಚನೆ ನೀಡಿದ ಸಚಿವರು, ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸಿದವರಿಗೆ ಅನ್ಯಾಯ ಮಾಡುವುದು ಬೇಡ ಎಂದು ಹೇಳಿದರು.

ಎಬಿಆರ್‌ಕೆಪ್ರಗತಿ ಸಾಧಿಸಿ: ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ (ಎಬಿಆರ್‌ಕೆ) ಯೋಜನೆಯಡಿ ಜಿಲ್ಲೆಯಲ್ಲಿ ಶೇ.80 ರಷ್ಟು ಸಾಧನೆ ತೋರಿದ್ದು, ಇನ್ನೂ ಹೆಚ್ಚಿನ ರೀತಿಯಲ್ಲಿ ಪ್ರಗತಿ ಸಾಧಿಸಬೇಕು. ಈ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸಬೇಕು ಎಂದು ಸಚಿವರು ತಿಳಿಸಿದರು.

ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ, ಯಾವುದೇ ಕಾರಣಕ್ಕೂ ಜಿಲ್ಲಾ ಆಸ್ಪತ್ರೆಯ ವೈದ್ಯರು ಹೊರಗಡೆ ಚೀಟಿ ಬರೆಯಕೂಡದು ಈ ಕುರಿತು ವೈದ್ಯರಿಗೆ ಸೂಚನೆ ನೀಡುವಂತೆ ಜಿಲ್ಲಾ ಶಸ್ತ್ರಕಿತ್ಸಕರಿಗೆ ಸೂಚನೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಶಸ್ತ್ರಚಿಕಿತ್ಸಕರು ಹೊರಗಡೆಗೆ ಔಷಧಿ ಚೀಟಿ ಬರೆಯದಂತೆ ಈಗಾಗಲೇ ಎಲ್ಲ ವೈದ್ಯರಿಗೆ ಸೂಚನೆ ನೀಡಲಾಗಿದೆ. ರೆಫರೆನ್ಸ್ ಕೂಡ ಕಡಿಮೆಯಾಗಿದ್ದು, ಜಿಲ್ಲಾಸ್ಪತ್ರೆಯಲ್ಲಿ ಉತ್ತಮ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಔಷಧಿಗಳು, ಮೆಡಿಸಿನಲ್ ಆಕ್ಸಿಜನ್, ಆರೋಗ್ಯ ಉಪಕರಣಗಳು, ಲ್ಯಾಬ್ ರಾಸಾಯನಿಕಗಳು, ಎಕ್ಸ್ ರೇ ಫಿಲಂಗಳು, ಯಂತ್ರೋಪಕರಣಗಳ ದುರಸ್ಥಿ, ವಿದ್ಯುತ್ ಸರಬರಾಜು ದುರಸ್ಥಿ, ಆರ್ಥೋ ಇಂಪ್ಲಾಂಟ್‌ಗಳು, ಲಿನನ್ ಸಾಮಾಗ್ರಿಗಳು, ಇಂಧನ, ನೀರು ಪೂರೈಕೆ, ಶೌಚಾಲಯ ದುರಸ್ಥಿ ಇನ್ನಿತರೆ ವೆಚ್ಚಗಳು ಸೇರಿದಂತೆ 2023-24ನೇ ಸಾಲಿನ ಆರ್ಥಿಕ ವರ್ಷಕ್ಕೆ ಜಿಲ್ಲಾ ಆಸ್ಪತ್ರೆಗೆ ರೂ.13 ಕೋಟಿ ಅಂದಾಜು ವೆಚ್ಚ ಇದೆ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾಸ್ಪತ್ರೆಯ ಆರ್ಥೋ,ಕಣ್ಣು,ಜನರಲ್ ಸರ್ಜರಿ, ರಕ್ತನಿಧಿ ಕೇಂದ್ರ, ಪಿಡಿಯೋಟ್ರಿಕ್ಸ್, ಫೋರೆನ್ಸಿಕ್ ವಿಭಾಗಗಳಿಗೆ ಅವಶ್ಯವಾಗಿ ಬೇಕಾಗಿರುವ ಯಂತ್ರೋಪಕರಣಗಳನ್ನು ನಿಯಮಾನುಸಾರ ಸಮಿತಿಯಲ್ಲಿ ಹಣ ಲಭ್ಯತೆಯ ಅನುಸಾರ ಸರಬರಾಜು ಪಡೆಯಲು ಅನುಮತಿ ನೀಡುವಂತೆ ಕೋರಿದರು.

ಸಭೆಯಲ್ಲಿ ಶಾಸಕರಾದ ಡಾ.ಎಂ. ಚಂದ್ರಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ್, ಭಾರತೀಯ ವೈದ್ಯ ಸಂಘ ಜಿಲ್ಲಾ ಶಾಖೆಯ ಡಾ.ದಿನೇಶ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಮಲ್ಲಿಕಾರ್ಜುನ್, ಬೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ಜಯಣ್ಣ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಜಿಲ್ಲಾಸ್ಪತ್ರೆಯ ಸಿಬ್ಬಂದಿ ಇದ್ದರು.

---

# ಜೆ.ಜೆ ಹಟ್ಟಿ ಡಾ.ಬಿ.ತಿಪ್ಪೇಸ್ವಾಮಿಗೆ ಟಿಕೆಟ್ ನೀಡಲು ಕಾಂಗ್ರೆಸ್ ಹೈಕಮಾಂಡಗೆ ಒತ್ತಾಯಿಸಿ: ಮನವಿ

» **ಚಳ್ಳಕೆರೆ**

ಕಾಂಗ್ರೆಸ್ ಪಕ್ಷದ ಹಿರಿಯ ಯುವ ಮುಖಂಡ, ಮಾಜಿ ಅಭ್ಯರ್ಥಿ ಜೆ.ಜೆ. ಹಟ್ಟಿ ಡಾ.ಬಿ.ತಿಪ್ಪೇಸ್ವಾಮಿಯವರಿಗೆ 2024ರ ಲೋಕಸಭಾ ಚುನಾವಣೆಗೆ ಸ್ಪರ್ಧಿಸಲು ಕಾಂಗ್ರೆಸ್ ಪಕ್ಷದ ಹೈಕಮಾಂಡನ್ನು ಒತ್ತಾಯ ಪಡಿಸುವಂತೆ ಸ್ಥಳೀಯ ಶಾಸಕ ಟಿ.ರಘುಮೂರ್ತಿಯವರಿಗೆ ಮನವಿ ಮಾಡಲಾಯಿತು.

ಲಿಡ್ಕರ್ ನಿಗಮದ ಮಾಜಿ ಅಧ್ಯಕ್ಷ ಒ. ಶಂಕರ್ ನೇತೃತ್ವದಲ್ಲಿ ನಿಯೋಗ ಶಾಸಕ ನಿವಾಸದಲ್ಲಿ ಶಾಸಕ ಟಿ.ರಘುಮೂರ್ತಿಯವರನ್ನು ಭೇಟಿ ಮಾಡಿ ಕಾಂಗ್ರೆಸ್ ಪಕ್ಷಕ್ಕೆ ಕಳೆದ ಹಲವಾರು ವರ್ಷಗಳಿಂದ ನಿಷ್ಠಾವಂತನಾಗಿ ಕಾರ್ಯನಿರ್ವಹಿಸಿ ಪಕ್ಷ ಸಂಘಟಿಸಲು ನಿರಂತರ ಪ್ರಯತ್ನ ನಡೆಸುತ್ತಿರುವ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಸಾಕಷ್ಟು ಜನಪ್ರಿಯತೆ ಹಾಗೂ ಜನರ ಮನಸ್ಸು ಗೆದ್ದಿರುವ ಜೆ.ಜೆ.ಹಟ್ಟಿ ಡಾ.ತಿಪ್ಪೇಸ್ವಾಮಿಯವರಿಗೆ ಟಿಕೆಟ್ ನೀಡುವಂತೆ ತಾವು ಪಕ್ಷದ ಮೇಲೆ ಒತ್ತಡ ಹೇರಬೇಕು. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಈಗಾಗಲೇ ತಿಪ್ಪೇಸ್ವಾಮಿಯವರು ಸ್ಪರ್ಧಿಸಬೇಕೆಂಬ ಒತ್ತಡ ಸಾರ್ವಜನಿಕರಿಂದ ಪಕ್ಷದ ನಿಷ್ಠಾವಂತ ಕಾರ್ಯಕರ್ತರು, ಅಭಿಮಾನಿಗಳಿಂದ ನಿರಂತರವಾಗಿ ಬರುತ್ತಿದೆ. ಶಾಸಕರು ಪಕ್ಷದ ವರಿಷ್ಠರ ಮನವಲಿಸುವಲ್ಲಿ ಮುಂದಾಗಬೇಕೆಂದು ಮನವಿ ಮಾಡಿದ್ದಾರೆ.



ಕಾಂಗ್ರೆಸ್ ಪಕ್ಷದ ಜಿಲ್ಲಾ ಕಾರ್ಯದರ್ಶಿ ಚೌಳೂರು ಪ್ರಕಾಶ್‌ಮಾತನಾಡಿ, ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈಗಾಗಲೇ ಡಾ.ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ ಪಕ್ಷದ ಕಾರ್ಯಕರ್ತರ ಅಪೇಕ್ಷೆಯಂತೆ ಪ್ರವಾಸ ಕೈಗೊಳ್ಳುತ್ತಿದ್ಧಾರೆ. ಜನರ ನಾಡಿಮಿಡಿತವನ್ನು ಚನ್ನಾಗಿ ಅರ್ಥೈಸಿಕೊಂಡಿದ್ದಾರೆ. ಸ್ಥಳೀಯವಾಗಿ ಸಾಕಷ್ಟು ಪ್ರಭಾವವನ್ನು ಹೊಂದಿರುವ ಏಕೈಕ ನಾಯಕ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿಯವರು. ರಾಜ್ಯದ ಕಾಂಗ್ರೆಸ್ ಪಕ್ಷದಲ್ಲಿ ಸಾಕಷ್ಟು ಅನುಭವವನ್ನು ಹೊಂದಿರುವ ಶಾಸಕ ಟಿ.ರಘುಮೂರ್ತಿಯವರು ಈ ಬಾರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಸ್ಥಳೀಯ ಅಭ್ಯರ್ಥಿ ಡಾ.ತಿಪ್ಪೇಸ್ವಾಮಿ ಪರವಾಗಿ ಪಕ್ಷವನ್ನು ವಿನಂತಿಸುವಂತೆ ಪ್ರಾರ್ಥಿಸಿದರು.

ಮನವಿ ಸ್ವೀಕರಿಸಿದ ಶಾಸಕ ಟಿ.ರಘುಮೂರ್ತಿ, ತಾವೆಲ್ಲರೂ ಕಾಂಗ್ರೆಸ್ ಪಕ್ಷವನ್ನು ಅಭಿಮಾನದಿಂದ ಬೆಳೆಸಿದ್ದೀರ, ಜಿಲ್ಲೆಯಲ್ಲಿ ನಡೆದ ಹಲವಾರು ಚುನಾವಣೆಗಳಲ್ಲಿ ಪಕ್ಷದ ವಿಜಯಕ್ಕೆ ಕಾರಣಕರ್ತರಾಗಿದ್ದೀರ, ನಿಮ್ಮ ಅನಿಸಿಕೆಗಳ ಬಗ್ಗೆ ಪಕ್ಷದ ಮುಖಂಡರಿಗೆ ಮನವರಿಕೆ ಮಾಡಿಕೊಡುವ ಭರವಸೆ ನೀಡಿದರು. ಜಿಲ್ಲಾಧ್ಯಕ್ಷ ದ್ಯಾವರನಹಳ್ಳಿ ತಿಪ್ಪೇಸ್ವಾಮಿ, ಸೈಯದ್ ಅನೀಸ್, ಅಶ್ವಕ್ ಅಲಿ, ಸೈಯದ್ ಇರ್ಫಾನ್, ಎಜಾಜ್ ಅಹಮ್ಮದ್, ಮಹಾಲಿಂಗಪ್ಪ, ಬೆಳಗೆರೆ ಶಿವಮೂರ್ತಿ ಗೌಡ, ರಾಜಶೇಖರ, ಮೂಡಲಗಿರಿಯಪ್ಪ, ತುರುವನೂರು ಮಂಜುನಾಥ ಉಪಸ್ಥಿತರಿದ್ದರು.

---

### ಅಪ್ಪು ಚಿತ್ರಕ್ಕೆ ಪುಷ್ಪ ನಮನ



**ದಾವಣಗೆರೆ:** ಸೂಪರ್ ಮಾಮ್ಸ್ ಆಫ್ ಗ್ರೂಪ್ ಹಾಗೂ ಕುಂದುವಾಡ ಕೆರೆ ವಾಯುವಿಹಾರ ಬಳಗದಿಂದ ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಅವರನ್ನು ಪುಣ್ಯಸ್ಮರಣೆ ಮಾಡುವ ಮೂಲಕ ನೆನೆಯಲಾಯಿತು.

ಭಾನುವಾರ ಮುಂಜಾನೆ ವಾಯುವಿಹಾರಿಗಳು, ಸೂಪರ್ ಮಾಮ್ಸ್ ಆಫ್ ಗ್ರೂಪ್ ತಂಡ ಕುಂದವಾಡ ಕೆರೆಯಂಗಳದಲ್ಲಿ ಪರಮಾತ್ಮ ಕರ್ನಾಟಕ ರತ್ನ ಅಪ್ಪು ಭಾವಚಿತ್ರವಿಟ್ಟು ಪುಷ್ಪ ನಮನ ಸಲ್ಲಿಸಿ ಪೂಜಿಸಿ 2ನೇ ವರ್ಷದ ಪುಣ್ಯಸ್ಮರಣೆ ಆಚರಿಸಲಾಯಿತು. ವಿಶೇಷವೆಂದರೆ ಪುನೀತ್ ಅಭಿನಯದ ರಾಜಕುಮಾರ ಚಿತ್ರದ ಗೊಂಬೆ ಹೇಳುತ್ತೈತೆ ಹಾಡು ಹಾಡುವ ಮೂಲಕ ಅಪ್ಪುಗೆ ಗೌರವ ಸಲ್ಲಿಸಿದ ಅಭಿಮಾನಿಗಳು.

---




**ಚಳ್ಳಕೆರೆ ನಗರದ ಪುನಿತ್‌ರಾಜ್‌ಕುಮಾರ್ ವೃತ್ತದಲ್ಲಿ ಪುನಿತ್‌ರವರ ಎರಡನೇ ವರ್ಷ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಅಭಿಮಾನಿ ಬಳಗ ಆಚರಿಸಿದರು. ಟಿ.ಜೆ. ವೆಂಕಟೇಶ್, ಬೇಕರಿಮಂಜುಣ್ಣ, ಡಾ. ಅನಿಲ್‌ಕುಮಾರ್, ಪಾಲನೇತ್ರನಾಯಕ, ಮನೋಜ್, ಪ್ರಶಾಂತ್, ಸಂತೋಷ್, ಏಕಾಂತನಾಯಕ, ವೀರೇಶ್, ಆದರ್ಶ, ವಂಶಿ, ಚಂದ್ರು, ಶಾಂತಕುಮಾರ್, ಮಂಜುನಾಥ ಮುಂತಾದವರು ಇದ್ದರು.**

---

### ಬಂಜಾರ ಮಹಿಳೆಯರಿಗೆ ಸಾಂಪ್ರದಾಯಿಕ ಕಸೂತಿ, ಪೂರಕ ಹೊಲಿಗೆ ತರಬೇತಿ: ಅರ್ಜಿ ಆಹ್ವಾನ

**ಚಿತ್ರದುರ್ಗ:** ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ವಲಯ (ದಾವಣಗೆರೆ, ಹಾವೇರಿ ಹಾಗೂ ಚಿತ್ರದುರ್ಗ ಜಿಲ್ಲೆ) ಕಚೇರಿ ವತಿಯಿಂದ ಬಂಜಾರ ಸಾಂಪ್ರದಾಯಕ ಕಸೂತಿ ಮತ್ತು ಪೂರಕ ಹೊಲಿಗೆ ತರಬೇತಿಯನ್ನು ಕೈಗೊಳ್ಳಲು ನುರಿತ, ಅರ್ಹ ನೋಂದಾಯಿತ ಸಂಘ, ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿರುತ್ತದೆ. ತರಬೇತಿ ನೀಡಬೇಕಾದ ಅರ್ಹ ತರಬೇತಿ ಸಂಸ್ಥೆಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತವುಳ್ಳ ಅರ್ಹ ನೋಂದಾಯಿತ ಸಂಘ, ಸಂಸ್ತೆಗಳು ದಾವಣಗೆರೆ ವಲಯ ಕಚೇರಿಗೆ ಭೇಟಿ ನೀಡಿ ನಿಗಮ ನಿಗಧಿಪಡಿಸಿರುವ ನಿಯಮಾನುಸಾರ ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ನವೆಂಬರ್ 4ರ ಒಳಗಾಗಿ ವಲಯ ಕಚೇರಿಗೆ ಸಲ್ಲಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ದಾವಣಗೆರೆ ವಲಯ ಕಚೇರಿ ದೂರವಾಣಿ ಸಂಖ್ಯೆ 08192-233678 ಗೆ ಸಂಪರ್ಕಿಸಬಹುದಾಗಿದೆ.

---

## ಪ್ರಮುಖ ಸುದ್ದಿ

**ಕಿತ್ತೂರು ರಾಣಿಚನ್ನಮ್ಮ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ರಘುಮೂರ್ತಿ ಅಭಿಮತ**

# ಹೋರಾಟ ನಡೆಸಿ ಅಮರರಾದವರು ಎಂದಿಗೂ ಜೀವಂತ

» **ಚಳ್ಳಕೆರೆ**

ರಾಜ್ಯದಲ್ಲಿ ಕಳೆದ ಹಲವಾರು ದಶಕಗಳಿಂದ ಹಲವಾರು ಮಹಿಳೆಯರು ದೇಶವನ್ನು ರಕ್ಷಿಸುವ ಕೆಲಸವನ್ನು ಮಾಡಿದ್ದಾರೆ. ರಾಜ, ಮಹಾರಾಜರ ಕಾಲದಲ್ಲೂ ಸಹ ಪ್ರಜೆಗಳ ಸಂರಕ್ಷಣೆಗಾಗಿ ಅನೇಕ ಮಹಾರಾಜರು ವೈರಿಗಳೊಂದಿಗೆ ಯುದ್ಧ ಮಾಡಿದ್ದಾರೆ. ಅದೇ ರೀತಿ ರಾಜ್ಯದ ಕಿತ್ತೂರು ಕೋಟೆ ರಕ್ಷಣೆಗಾಗಿ ವೀರಹೋರಾಟ ನಡೆಸಿದ ಕಿತ್ತೂರುರಾಣಿ ಚನ್ನಮ್ಮನ ಆದರ್ಶಗಳು ಇಡೀ ಮಹಿಳಾ ಸಮುದಾಯಕ್ಕೆ ಸ್ಫೂರ್ತಿದಾಯಕ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವೀರಶೈವ ಪಂಚಮಸಾಲಿ ಲಿಂಗಾಯತ ಸಂಘ ಹಾಗೂ ವೀರಶೈವ ಸೇವಾ ಸಮಾಜದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವೀರವನಿತೆ ಕಿತ್ತೂರುರಾಣಿ ಚನ್ನಮ್ಮ ಜಯಂತೋತ್ಸವ ಕಾರ್ಯಕ್ರಮವನ್ನು ಕಿತ್ತೂರುರಾಣಿ ಚನ್ನಮ್ಮ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಮೆರವಣಿಗೆಗೆ ಚಾಲನೆ ನೀಡಿ ನಂತರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ರಾಜ್ಯದ ಇತಿಹಾಸದಲ್ಲಿ



ಕೋಟೆಕೊತ್ತಲಗಳನ್ನು ರಕ್ಷಿಸಿದ ಕೆಲವೇ ಕೆಲವು ವೀರಮಹಿಳೆಯರಲ್ಲಿ ಕಿತ್ತೂರು ರಾಣಿಚನ್ನಮ್ಮ ಒಬ್ಬರು. ಬ್ರಿಟಿಷ್‌ಶಾಹಿ ಆಡಳಿತದ ವಿರುದ್ದ ಕೆಚ್ಚೆದೆಯ ಹೋರಾಟ ನಡೆಸಿದ ಕೀರ್ತಿ ಕಿತ್ತೂರುರಾಣಿಚನ್ನವ್ಮನವರದ್ದು. ತಮ್ಮ ಪ್ರಾಣವನ್ನು ಲೆಕ್ಕಿಸದೆ ಹೋರಾಟ ನಡೆಸಿ ಜನರ ರಕ್ಷಣೆಗಾಗಿ ವೀರಮರಣ ಹೊಂದಿದ ಚನ್ನಮ್ಮ ಮಹಿಳಾ ಸಮುದಾಯಕ್ಕೆ ಆದರ್ಶರು. ಅದೇ ರೀತಿ ಚಿತ್ರದುರ್ಗ ಕೋಟೆ ರಕ್ಷಣೆಗೆ ಒನಕೆ ಓಬವ್ವಸಹ ಬಲಿದಾನವಾಗಿದ್ದನ್ನು ನಾವೆಂದೂ ಮರೆಯಲು ಸಾಧ್ಯವಿಲ್ಲ. ಇಂತಹ ವೀರಮಹಿಳೆಯರು ಸದಾ ಸ್ಮರಣೀಯರು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ವೀರಶೈವ ಸಮಾಜ ಸೇವಾ ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು, ಕಿತ್ತೂರು ರಾಣಿಚನ್ನಮ್ಮ ನಡೆಸಿದ ಹೋರಾಟ ಕೇವಲ ನಮ್ಮ ಸಮುದಾಯಕ್ಕೆ ಮಾತ್ರ ಸೀಮಿತವಾಗಿರದೆ ಎಲ್ಲರಿಗೂ ಅವರ ತ್ಯಾಗ ಮತ್ತು ಬಲಿದಾನವನ್ನು ನಿರಂತರ ಜಾಗೃತಿಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕಿತ್ತೂರರಾಣಿಚನ್ನಮ್ಮ ಜಯಂತೋತ್ಸವವನ್ನು ರಾಷ್ಟ್ರೀಯ ಹಬ್ಬಗಳ ಆಚರಣೆ ಮೂಲಕ ಜನರಿಗೆ ತಿಳಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದೆ ಎಂದರು. ವೀರಶೈವ ಪಂಚಮಸಾಲಿ ಲಿಂಗಾಯತ ಸಂಘ ಅಧ್ಯಕ್ಷ ಕೆ.ಟಿ.ಶಿವಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಿತ್ತೂರು ರಾಣಿಚನ್ನಮ್ಮನವರ ಹೋರಾಟ, ತ್ಯಾಗ, ಬಲಿದಾನ ಮುಂತಾದವುಗಳ ಬಗ್ಗೆ ಇನ್ನೂ ಹೆಚ್ಚಿನ ರೀತಿಯಲ್ಲಿ ಸರ್ಕಾರ ಪ್ರಚಾರ ಕೈಗೊಳ್ಳಬೇಕಿದೆ. ಚನ್ನಮ್ಮನವರ ಹೆಸರಿನಲ್ಲಿ ಪ್ರತ್ಯೇಕ ಮಹಿಳಾ ಪ್ರಶಸ್ತಿಯನ್ನು ನೀಡುವ ಕೆಲಸವಾಗಬೇಕಿದೆ. ಕಿತ್ತೂರ ರಾಣಿಚನ್ನಮ್ಮ ಕೇವಲ ನಮ್ಮ ಸಮುದಾಯಕ್ಕೆ ಸೀಮಿತವಾಗದೆ ಸಮಸ್ತ ಸಮಾಜದ ಒಳಿತಿಗಾಗಿ ಸೇವೆ ಮಾಡಿದವರು. ಮುಂದಿನ ದಿನಗಳಲ್ಲೂ ಈ ಜಯಂತಿಯನ್ನು ಮತ್ತಷ್ಟು ವರ್ಣರಂಜಿತವಾಗಿ ಆಚರಿಸಲು ಚಿಂತನೆ ನಡೆಸಲಾಗಿದೆ ಎಂದರು. ಗೌರವಾಧ್ಯಕ್ಷ ಕೆ.ಬಸವರಾಜು(ವಂದನಾ), ಉಪಾಧ್ಯಕ್ಷ ಕೆ.ಎಂ.ಜಗದೀಶ್, ಎ.ವಿಜಯೇಂದ್ರ, ಕಾರ್ಯದರ್ಶಿ ಎಚ್.ವಿ.ಪ್ರಸನ್ನಕುಮಾರ್, ಸಹ ಕಾರ್ಯದರ್ಶಿ ಕೆ.ಈಶ್ವರಪ್ಪ, ನಿರ್ದೇಶಕ ಕೆ.ಎಂ.ಕೊಟ್ರೇಶ್, ಸಿ.ಗುರುಸಿದ್ದಮೂರ್ತಿ, ಪಿ.ಜಗದೀಶ್, ರೇವಣ್ಣ, ಲೋಕೇಶ್, ಪಂಚಮಸಾಲಿ ಸಂಘದ ಕಾರ್ಯದರ್ಶಿ ಎಚ್.ಪ್ರಕಾಶ್, ಮಾಜಿ ಅಧ್ಯಕ್ಷ ಬಿ.ನಾಗೇಂಧ್ರಪ್ಪ, ಎಸ್.ರುದ್ರಪ್ಪ, ಮಹಿಳಾ ಘಟಕದ ಅಧ್ಯಕ್ಷ ಪದ್ಮನಾಗರಾಜು, ಕಾರ್ಯದರ್ಶಿ ಮಂಜುಳಾನಾಗರಾಜು, ಪಂಚಮಸಾಲಿ ಮಹಿಳಾ ಸಂಘದ ಅಧ್ಯಕ್ಷೆ ಮಂಜುಳಾರವಿಕುಮಾರ್, ಕಾರ್ಯದರ್ಶಿ ಪ್ರೇಮಮಂಜುನಾಥ, ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬೌದ್ಧಿಕ ಭ್ರಷ್ಟಾಚಾರ ಅಪಾಯಕಾರಿ, ದೇಶದ ಪ್ರಗತಿಗೆ ಮಾರಕ



» ದಾವಣಗೆರೆ

ದೇಶದ ಪ್ರಗತಿಯು ಆಯಾ ದೇಶದ ಕಾರ್ಯಾಂಗದ ಪ್ರಾಮಾಣಿಕತೆ, ನಿಷ್ಠೆಯ ಆಧಾರದ ಮೇಲೆ ನಿರ್ಧಾರವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಹೇಳಿದರು. ದಾವಣಗೆರೆಯ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿ ಆಯೋಜಿಸಲಾದ ಜಾಗೃತಿ ಅರಿವು ಸಪ್ತಾಹಕ್ಕೆ ಚಾಲನೆ ನೀಡಿ ಮಾತನಾಡಿದರು.ಭಾರತದ ಜನರ ಶ್ರಮದ ತೆರಿಗೆ,ಕಂದಾಯ ಮುಂತಾದ ಕೊಡುಗೆಗಳಿಂದಾಗಿ ಸಾರ್ವಜನಿಕ ಆಡಳಿತ ಸಾಧ್ಯವಾಗಿದೆ.ಸಾರ್ವಜನಿಕ ಜೀವನದಲ್ಲಿ ಸರ್ಕಾರಿ ಅಧಿಕಾರಿಗಳು, ನೌಕರರಾದ ನಾವುಗಳು ಜನರಿಗೆ, ಈ ದೇಶಕ್ಕೆ ನಿಷ್ಠರಾಗಿ,ಪ್ರಾಮಾಣಿಕ ಸೇವೆಗೆ ಬದ್ಧರಾಗಿರಬೇಕು. ಆದ್ದರಿಂದ ಭ್ರಷ್ಟಾಚಾರವನ್ನು ಮೂಲೋತ್ಪಾಟನೆ ಮಾಡಲು ಮತ್ತು ಸಾರ್ವಜನಿಕ ಸೇವೆಗಳಲ್ಲಿ ಪಾರದರ್ಶಕತೆಯನ್ನು ಮೆರೆಯೋಣ ಎಂದು ಕರೆ ನೀಡಿದರು.ಈ ದೇಶವೇ ನನ್ನ ಕುಟುಂಬ, ಸೇವೆಯೇ ನಮ್ಮ ಮುಖ್ಯ ಧ್ಯೇಯವಾಗಬೇಕು. ನ್ಯಾಯ ಕೋರಿ ಬರುವ ಬಡ ಕಕ್ಷಿದಾರರಿಗೆ ಯಾವುದೇ ವಿಳಂಬ ಮಾಡದೆ ಪಾರದರ್ಶಕವಾದ ಜನಸ್ನೇಹಿ ಆಡಳಿತ ನೀಡೋಣ. ಭ್ರಷ್ಟಾಚಾರವನ್ನು ವಿರೋಧಿಸೋಣ, ರಾಷ್ಟ್ರಕ್ಕೆ ಬದ್ಧರಾಗಿರೋಣ ಎಂಬ ಘೋಷವಾಕ್ಯದಂತೆ ನಾವು ನಮ್ಮ ಜೀವನದಲ್ಲಿ ಪ್ರಾಮಾಣಿಕತೆಯನ್ನು ಅಳವಡಿಸಿ ಕೊಳ್ಳೋಣ ಎಂದರು.ಕೇವಲ ಅಕ್ರಮವಾಗಿ ಹಣ,ವಸ್ತುರೂಪಗಳಲ್ಲಿ ಅಕ್ರಮ ಸಂಪಾದನೆಯಷ್ಟೇ ಭ್ರಷ್ಟಾಚಾರದಲ್ಲ. ನಾವು ನಮ್ಮ ನಮ್ಮ ಕೆಲಸಗಳನ್ನು ಅನಗತ್ಯವಾಗಿ ವಿಳಂಬ ಮಾಡಿದರೂ ಸಹ ಭ್ರಷ್ಟಾಚಾರವೇ ಆಗುತ್ತದೆ. ಹೀಗಾಗಿ ಭ್ರಷ್ಟಾಚಾರದ ವ್ಯಾಖ್ಯಾನವೂ ಸಹ ಬದಲಾಗಬೇಕಿದೆ. ಇಂತಹ ಬೌದ್ಧಿಕ ಭ್ರಷ್ಟಾಚಾರವು ಅತ್ಯಂತ ಅಪಾಯಕಾರಿ ಅಷ್ಟೇ ಅಲ್ಲ, ದೇಶದ ಏಳಿಗೆಗೆ ಸಹ ಮಾರಕ ಎಂದು ಹೇಳಿದರು. ಈ ಸಂದರ್ಭದಲ್ಲಿ ಹಾಜರಿದ್ದ ವಿವಿಧ ನ್ಯಾಯಾಲಯಗಳ ನ್ಯಾಯಾಧೀಶರುಗಳು, ಮುಖ್ಯ ಆಡಳಿತಾಧಿಕಾರಿ, ಸಿಬ್ಬಂದಿಗಳು ಪ್ರತಿಜ್ಞೆ ಸ್ವೀಕರಿಸಿದರು. ರಾಜೇಶ್ವರಿ ಎನ್.ಹೆಗಡೆ ಪ್ರತಿಜ್ಞಾವಿಧಿ ಬೋಧಿಸಿದರು.

### ನಾಡಿನ ಭವ್ಯತೆ ಅಳತೆ ಮಾಡುವಂತದ್ದು ಹಣ, ಆಸ್ತಿ, ಅಂತಸ್ತು, ಕಟ್ಟಡದಿಂದಲ್ಲ: ಸಾಣೇಹಳ್ಳಿಶ್ರೀ



» ಹೊಸದುರ್ಗ

ಒಂದು ನಾಡಿನ ಭವ್ಯತೆಯನ್ನು ಅಳತೆ ಮಾಡುವಂತದ್ದು ಹಣ, ಆಸ್ತಿ, ಅಂತಸ್ತು, ಕಟ್ಟಡದಿಂದಲ್ಲ.ಅಲ್ಲಿನ ಸಾಹಿತ್ಯ ಸಂಗೀತ, ಕಲೆಯಿಂದ ಎಂದು ಸಾಣೇಹಳ್ಳಿ ಪಂಡಿತಾರಾಧ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಸಾಣೇಹಳ್ಳಿಯಲ್ಲಿ ಭಾನುವಾರ ನಡೆದ ಅಂತರ್ ಜಿಲ್ಲಾ ಸಾಹಿತ್ಯ ಸಮ್ಮೇಳನದ ಲಾಂಛನ ಬಿಡುಗಡೆ ಗೊಳಿಸಿ ಮಾತನಾಡಿದರು.

ಆರಂಭದಲ್ಲಿ ನಮ್ಮನ್ನು ನಡೆದಾಡುವ ದೇವರೆಂದು ಇಲ್ಲಿರುವಂಥವರು ಕರೆದರು. ಆದರೆ ಇಲ್ಲಿರುವವರೆಲ್ಲರೂ ನಡೆದಾಡುವ ದೇವರುಗಳೇ. ಯಾರೋ ಒಬ್ಬರನ್ನು ದೇವರನ್ನಾಗಿ ಮಾಡಿ ಉಳಿದವರೆಲ್ಲರೂ ದೆವ್ವವಾಗುತ್ತಿದ್ದೀರಿ ಎಂದು ಹಾಸ್ಯಭರಿತ ಮಾತುಗಳನ್ನಾಡಿ ಶ್ರೀಗಳು ಸಮ್ಮೇಳದ ಅಧ್ಯಕ್ಷ ಸ್ಥಾನ ನಮಗೆ ಮುಜುಗರ ತಂದಿದೆ. ಮೊದಲು ಸಾಣೇಹಳ್ಳಿಯಲ್ಲಿ ಸಾಹಿತ್ಯ ಸಮ್ಮೇಳನ ನಡೆಯಬೇಕು ಎಂದಾಗ ನಮಗೆ ಆದ ಸಂತೋಷ ಅಷ್ಟಿಷ್ಟಲ್ಲ.ನಂತರ ನಮ್ಮನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದಾಗ ಒಂದು ರೀತಿಯಲ್ಲಿ ಮುಜುಗರ. ನಂತರ ಉತ್ಸಾಹ ಕುಂದಿತು ಎಂದರು.

ನಾವು ವ್ಯವಹಾರದಲ್ಲಿ ತುಂಬ ಕಟ್ಟುನಿಟ್ಟು. ಚೌಕಾಸಿಯಿಂದ ವ್ಯವಹಾರ ಮಾಡುತ್ತೇವೆ. ಇಲ್ಲಿ ಏನೇ ನಡೆದರೂ ಎಲ್ಲದಕ್ಕೂ ಲೆಕ್ಕಪತ್ರವನ್ನಿಡುತ್ತೇವೆ.

ಬೆಳಗ್ಗೆ ಆಕಾಶವಾಗಿ ಸಂದರ್ಶನದಲ್ಲಿ ಒಬ್ಬ ವ್ಯಕ್ತಿ ಕೇಳಿದ ಪ್ರಶ್ನೆ ಬರಗಾಲದಲ್ಲಿ ನಾಟಕೋತ್ಸವ ಮಾಡುತ್ತೀರಲ್ಲ ಎಂದು. ಆಗ ನಾವು ಹೇಳಿದ್ದು

ಒಂದು ನಾಡಿನ ಭವ್ಯತೆಯನ್ನು ಅಳತೆ ಮಾಡುವಂತದ್ದು ಹಣ, ಆಸ್ತಿ, ಅಂತಸ್ತು, ಕಟ್ಟಡದಿಂದಲ್ಲ.ಅಲ್ಲಿನ ಸಾಹಿತ್ಯ ಸಂಗೀತ,ಕಲೆಯಿಂದ. ಅದ್ದೂರಿಯಾಗಿ ಪ್ರಸಾದ ಭರದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನದ ಸೊಗಡು ಮರೀಚಿಕೆಯಾಗಬಾರದು. ಎರಡೂ ಮುಖ್ಯವಾಗಬೇಕು. ಎಲ್ಲರೂ ಅತಿಥಿಗಳಾಗಿ ಭಾಗವಹಿಸುವುದಕ್ಕಿಂತ ಕಾರ್ಯಕರ್ತರಾಗಿ ಭಾಗವಹಿಸಬೇಕು. ಆಗ ಕಾರ್ಯಕ್ರಮ ಯಶಸ್ವಿಯಾಗುವುದರಲ್ಲಿ ಅನುಮಾನವೇ ಇಲ್ಲ. ಎರಡೂ ಜಿಲ್ಲೆಯಲ್ಲಿ ಮಠಾಧಿಪತಿಗಳಿದ್ದಾರೆ. ಅವರಿಗೂ ಒಂದು ಗೋಷ್ಠಿಯನ್ನು ಏರ್ಪಡಿಸಬೇಕು. ರಾಜಕಾರಣಿಗಳಿಗೂ ಗೋಷ್ಠಿಯನ್ನು ಏರ್ಪಡಿಸುವ ಚಿಂತನೆ ಮಾಡಬೇಕು ಎಂದರು.


# ಕುಷ್ಠರೋಗ ಮಾರಣಾಂತಿಕವಲ್ಲ: ವೈ.ತಿಪ್ಪೇಶ್

» ಚಿತ್ರದುರ್ಗ

ಕುಷ್ಠರೋಗ ಮಾರಣಾಂತಿಕ ರೋಗವಲ್ಲ. ಚಿಕಿತ್ಸೆಯಿಂದ ಗುಣಮುಖ ಹೊಂದಬಹುದು ಎಂದು ತಾಲ್ಲೂಕು ಕುಷ್ಠರೋಗ ಮೇಲ್ವಿಚಾರಣಾ ಅಧಿಕಾರಿ ವೈ.ತಿಪ್ಪೇಶ್ ಹೇಳಿದರು.

ಇಲ್ಲಿನ ಬುದ್ಧ ನಗರ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಸೋಮವಾರ ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಆರೋಗ್ಯ ಕ್ಷೇಮ ಉಪ ಕೇಂದ್ರಗಳ ಸಮುದಾಯ ಆರೋಗ್ಯ ಅಧಿಕಾರಿಗಳಿಗೆ ಕುಷ್ಠರೋಗ ಪ್ರಕರಣ ಪತ್ತೆ ಅಭಿಯಾನ ಮೇಲ್ವಿಚಾರಣ ತರಬೇತಿ ಕಾರ್ಯಗಾರದಲ್ಲಿ ಅವರು ಮಾತನಾಡಿದರು.

ಕುಷ್ಠರೋಗದ ನಿರ್ಮೂಲನೆಯನ್ನು ಸಾಧಿಸಲಾಗಿದೆಯಾದರೂ, ಇನ್ನೂ ಕೆಲವು ವರ್ಷಗಳವರೆಗೆ ಹೊಸ ಪ್ರಕರಣಗಳು ಸಂಭವಿಸುತ್ತಲೇ ಇರುತ್ತವೆ. ಸಮಾಜದಲ್ಲಿ ಮತ್ತೆ ರೋಗ ಕಾಣಿಸಿಕೊಳ್ಳದಂತೆ ನಿರಂತರ ನಿಗಾ ವಹಿಸಬೇಕು. ಆರಂಭದಲ್ಲಿ ವಾರ್ಷಿಕ ಹೊಸ ಪ್ರಕರಣ ಪತ್ತೆ ದರ ಗಮನಾರ್ಹ ಕುಸಿತ ತೋರಿಸಿದೆ ಎಂದರು .ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ




ಎನ್.ಎಸ್.ಮಂಜುನಾಥ್ ಮಾತನಾಡಿ, ಹಲವಾರು ಶತಮಾನಗಳಿಂದ, ಕುಷ್ಠರೋಗವು ಒಂದು ಭಯಾನಕ, ಗುಣಪಡಿಸಲಾಗದ ಕಾಯಿಲೆಯಾಗಿ ಉಳಿದಿದೆ. ರೋಗಿಗಳನ್ನು ಅಸಹ್ಯದಿಂದ ನೋಡಲಾಯಿತು, ಬಹಿಷ್ಕರಿಸಲಾಯಿತು ಮತ್ತು ಅಮಾನವೀಯ ಚಿಕಿತ್ಸೆಗೆ ಒಳಪಡಿಸಲಾಯಿತು. ಇಂದು, ಕುಷ್ಠರೋಗದ ವಿರುದ್ಧದ ಕಳಂಕ ಮತ್ತು ಪೂರ್ವಾಗ್ರಹ ಗಣನೀಯವಾಗಿ ಕಡಿಮೆಯಾಗಿದೆ ಮತ್ತು ರೋಗದ ವಿನಾಶಗಳು ಸಮುದಾಯದಲ್ಲಿ ವಿರಳವಾಗಿ ಕಂಡುಬರುತ್ತವೆ. ರೋಗವನ್ನು ಗುಣಪಡಿಸಲು ಪರಿಣಾಮಕಾರಿ ಔಷಧಿಗಳ ಲಭ್ಯತೆ, ಆರಂಭಿಕ ರೋಗನಿರ್ಣಯಕ್ಕೆ ತಂತ್ರಜ್ಞಾನದ ಪ್ರವೇಶ, ವಿರೂಪಗಳನ್ನು ತಡೆಗಟ್ಟುವುದು ಮತ್ತು ಸರಿಪಡಿಸುವುದು ಮತ್ತು ಕುಷ್ಠರೋಗದ ಬಗ್ಗೆ ಸಮಾಜದಲ್ಲಿ ಹೆಚ್ಚಿದ ಜಾಗೃತಿಯಿಂದಾಗಿ ಇದು ಸಾಧ್ಯವಾಗಿದೆ. ನಾವು ಯಶಸ್ವಿಯಾಗಿ ನಿರ್ಮೂಲನೆಯನ್ನು ಸಾಧಿಸಿದ್ದೇವೆ ಮತ್ತು ಈಗ ಕುಷ್ಠರೋಗದ ನಿರ್ಮೂಲನೆಯತ್ತ ಸಾಗುತ್ತಿದ್ದೇವೆ ಎಂದರು.ಕುಷ್ಠರೋಗ ಪ್ರಕರಣ ಪತ್ತೆ ಅಭಿಯಾನ ರಾಜ್ಯದಾದ್ಯಂತ ನವೆಂಬರ್15ರಿಂದಡಿಸೆಂಬರ್2ರವರಗೂ ನಡೆಯಲಿದ್ದು, ಪೂರ್ವಭಾವಿಯಾಗಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿಯೂ ಸೂಕ್ಷ್ಮ ಕ್ರಿಯಾ ಯೋಜನೆ ತಯಾರಿಸಿ ಸಮೀಕ್ಷೆ ನಡೆಸಲು ಸಂಬಂಧಿಸಿದ ಕ್ಷೇತ್ರ ಸಿಬ್ಬಂದಿಗಳಿಗೆ ತರಬೇತಿ ಹಮ್ಮಿಕೊಳ್ಳುವಂತೆ ಮತ್ತು ಮೇಲ್ವಿಚಾರಣ ಚೆಕ್‌ಲಿಸ್ಟ್ ತಯಾರಿಸಿಕೊಳ್ಳಲು ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ನರಗಳ ತಪಾಸಣೆ, ಮಚ್ಚೆಗಳ ತಪಾಸಣೆ, ಮಾಹಿತಿ ಶಿಕ್ಷಣ ಸಂವಹನ ಸಮುದಾಯದೊಂದಿಗೆ ನಡೆಸುವ ರೀತಿ, ಇತರೆ ಪೂರ್ವಸಿದ್ಧತೆಗಳ ಬಗ್ಗೆ ತಿಳಿಸಿದರು.

ತರಬೇತಿ ಕಾರ್ಯಗಾರದಲ್ಲಿ ಬುದ್ಧನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುರೇಂದ್ರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗಂಗಾಧರೆಡ್ಡಿ, ಗುರುಮೂರ್ತಿ, ರಂಗಾರೆಡ್ಡಿ, ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಸಮುದಾಯ ಆರೋಗ್ಯ ಅಧಿಕಾರಿಗಳು ಇದ್ದರು.

## ಜಿಲ್ಲಾ ಮಾದಿಗ ನೌಕರರ ಸಂಘದಿಂದ ಪ್ರತಿಭಾ ಪುರಸ್ಕಾರ



» ಚಿತ್ರದುರ್ಗ

ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಹಿಂದುಳಿದಿರುವ ಮಾದಿಗ ಜನಾಂಗ ಚುನಾವಣೆಯಲ್ಲಿ ನಿಮ್ಮ ಪರ ಕೆಲಸ ಮಾಡುವವರನ್ನು ಆಯ್ಕೆ ಮಾಡುವಂತ ಜಾಗೃತಿ ಮೂಡಿಸಿಕೊಳ್ಳಬೇಕಿದೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಹೇಳಿದರು.

ಜಿಲ್ಲಾ ಮಾದಿಗ ನೌಕರರ ಸಾಂಸ್ಕೃತಿಕ ಸಂಘದಿಂದ 2022–23 ನೇ ಸಾಲಿನಲ್ಲಿ ಹತ್ತನೆ ತರಗತಿ ಹಾಗೂ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ತ.ರಾ.ಸು.ರಂಗಮಂದಿರದಲ್ಲಿ ಭಾನುವಾರ ಏರ್ಪಡಿಸಲಾಗಿದ್ದ ಪ್ರತಿಭಾ ಪುರಸ್ಕಾರ ಉದ್ಘಾಟಿಸಿ ಮಾತನಾಡಿದರು. ಮಾದಿಗ ನೌಕರರ ಸಾಂಸ್ಕೃತಿಕ ಸಂಘದವರು ಅದ್ಭುತವಾದ ಕೆಲಸ ಮಾಡುತ್ತಿದ್ದಾರೆ. ಪ್ರತಿಭಾ ಪುರಸ್ಕಾರದ ಮೂಲಕ ಮಕ್ಕಳನ್ನು ಪ್ರೋತ್ಸಾಹಿಸಬೇಕಿದೆ. ಜಾತಿಯತೆ ನಿರ್ಮೂಲನೆಯಾಗಬೇಕು. ಎಲ್ಲರೂ ಒಗ್ಗಟ್ಟಾಗಿ ಚುನಾವಣೆಯಲ್ಲಿ ಯೋಗ್ಯರನ್ನು ಆಯ್ಕೆ ಮಾಡಿ. ಅಮೂಲ್ಯವಾದ ಮತ ಮೌಲ್ಯ ಉಳಿಯಬೇಕಾದರೆ ಯಾವ ಜಾಗದಲ್ಲಿ ಯಾರನ್ನು ಕೂರಿಸಬೇಕೆಂಬ ಅರಿವು ನಿಮ್ಮಲ್ಲಿರಬೇಕೆಂದು ವಿದ್ಯಾರ್ಥಿಗಳನ್ನು ಎಚ್ಚರಿಸಿದರು. ಮಾಜಿ ಸಚಿವ ಹೆಚ್. ಆಂಜನೇಯ ಮಾತನಾಡಿ ಎಲ್ಲಾ ರಂಗದಲ್ಲಿಯೂ ಸ್ಪರ್ಧೆಯಿರುವುದರಿಂದ ಅಂಕಗಳಿಗೆ ಹೆಚ್ಚಿನ ಮಹತ್ವವಿದೆ. ನಮ್ಮ ಕಾಲದಲ್ಲಿ ಸರ್ಕಾರಿ ನೌಕರಿಗೆ ಅರ್ಜಿ ಸಲ್ಲಿಸುವವರು ಕಡಿಮೆಯಿದ್ದರು. ಅರ್ಜಿ ಹಾಕಿದ ಎಲ್ಲರಿಗೂ ನೌಕರಿ ಸಿಗುತ್ತಿತ್ತು. ಈಗ ಜನಸಂಖ್ಯೆ ಜಾಸ್ತಿಯಾಗುತ್ತಿರುವುದರಿಂದ ಅಂಕಗಳ ಮಾನದಂಡದ ಮೇಲೆ ನೌಕರಿ ನೀಡಲಾಗುತ್ತಿದೆ. ಹಾಗಾಗಿ ಓದಿನ ಕಡೆ ಹೆಚ್ಚು ಗಮನ ಕೊಡಿ ಎಂದು ವಿದ್ಯಾರ್ಥಿಗಳಿಗೆ ಹೇಳಿದರು.ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಪ್ರಬಲರು ಸೇರಿದ್ದಾರೆ. ಅಂಕಗಳ ಆಧಾರದ ಮೇಲೆ ಹುದ್ದೆ ಸಿಗುವುದರಿಂದ ಶಿಫಾರಸ್ಸು ನಡೆಯುವುದಿಲ್ಲ. ಒಳಮೀಸಲಾತಿ ಸಿಗದಿದ್ದರೆ ಜನಾಂಗ ಅವನತ್ತಿಯತ್ತ ಸಾಗುವುದರಲ್ಲಿ ಅನುಮಾನವಿಲ್ಲ. ಮಾದಿಗ ಅಧಿಕಾರಿಗಳ ಸಂಖ್ಯೆ ಜಿಲ್ಲೆಯಲ್ಲಿ ಕಡಿಮೆಯಿದೆ. ವಿಧಾನಸಭೆ ಚುನಾವಣೆಯಲ್ಲಿ ಕುತಂತ್ರದಿಂದ ನನ್ನನ್ನು ಸೋಲಿಸಿದರು. ಆಗಂತ ನಾನು ಹೆದರುವುದಿಲ್ಲ. ನಿರಂತರವಾಗಿ ಹೋರಾಡುತ್ತೇನೆ. ಅನ್ಯಾಯಕ್ಕೊಳಗಾದವರು, ಶೋಷಿತರ ಪರವಾಗಿರುತ್ತೇನೆ.

ಜನಾಂಗದ ಅಸ್ತಿತ್ವ ನಾಶದ ಅಂಚಿನಲ್ಲಿದೆ. ಶಿಕ್ಷಣ, ಸಂಘಟನೆ, ಹೋರಾಟದ ಮೂಲಕ ನಿಮ್ಮ ಭವಿಷ್ಯವನ್ನು ಕಟ್ಟಿಕೊಳ್ಳಿ. ಆಸ್ತಿ ಮಾರಾಟ ಮಾಡಬಹುದು. ವಿದ್ಯೆ ಮಾರಲು ಆಗುವುದಿಲ್ಲ ಎಂದು ಶಿಕ್ಷಣದ ಮಹತ್ವ ತಿಳಿಸಿದರು.

ಅಧೀಕ್ಷಕ ಇಂಜಿನಿಯರ್ ಕೆ.ಜಿ.ಜಗದೀಶ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ಐ.ಪಿ.ಎಸ್.ಅಧಿಕಾರಿ ಶ್ರೀಮತಿ ಕವಿತ, ನಿವೃತ್ತ ಜಂಟಿ ನಿರ್ದೇಶಕ ಎಂ.ರೇವಣಸಿದ್ದಪ್ಪ, ಜಿಲ್ಲಾ ಮಾದಿಗ ನೌಕರರ ಸಾಂಸ್ಕೃತಿಕ ಸಂಘದ ಅಧ್ಯಕ್ಷ ಚಂದ್ರಪ್ಪ ಸಿ. ಸೇರಿದಂತೆ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು.

## ಹೊಸದುರ್ಗದ ಮಣ್ಣು ಅಮೃತ ಕಳಶದ ಮೂಲಕ ಸಮರ್ಪಣೆ



» ಹೊಸದುರ್ಗ

“ನನ್ನ ಮಣ್ಣು ನನ್ನ ದೇಶ” ಕಾರ್ಯಕ್ರಮದಡಿ ಹೊಸದುರ್ಗ ಪುರಸಭೆಯಿಂದ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಂದ ಮಣ್ಣು ಮತ್ತು ಅಕ್ಕಿಯನ್ನು ಸಂಗ್ರಹಿಸಿ ದೆಹಲಿಯಲ್ಲಿ ನಡೆಯುವ ಬೃಹತ್ ಕಾರ್ಯಕ್ರಮಕ್ಕೆ ಅಮೃತ ಕಳಶವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ಕೌಟ್ಸ್ ಮತ್ತು ಗೈಡ್ಸ್, ಎನ್.ಎಸ್.ಎಸ್ ವಿದ್ಯಾರ್ಥಿ ಪ್ರತಾಪ್.ಬಿ.ಜಿ ರವರಿಗೆ ಹಸ್ತಾಂತರಿಸುವ ಮೂಲಕ ದೆಹಲಿ ಕಾರ್ಯಕ್ರಮಕ್ಕೆ ನಿಯೋಜನೆ ಮಾಡಲಾಗಿದ್ದು ಅಮೃತ ವಾಟಿಕಾ ವನಕ್ಕೆ ನೀಡಲು ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು.ಜಿ.ವಿ ಕಳಶ ಹಸ್ತಾಂತರಿಸಿ ಸಾರ್ವಜನಿಕರಲ್ಲಿ ಭಾವೈಕ್ಯತೆ ಸಂದೇಶ ನೀಡಿದರು.

ಸ್ಕೌಟ್ಸ್ ಮತ್ತು ಗೈಡ್ಸ್, ಎನ್.ಎಸ್.ಎಸ್ ವಿದ್ಯಾರ್ಥಿ ಪ್ರದೀಪ.ಟಿ.ಡಿ, ಮಾತನಾಡಿ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಯಿಂದ 7 ಜನರನ್ನು ಆಯ್ಕೆ ಮಾಡಲಾಗಿದ್ದು ರಾಷ್ಟ್ರೀಯ ಕಾರ್ಯಕ್ರಮಕ್ಕೆ ನನ್ನನ್ನು ಆಯ್ಕೆ ಮಾಡಿರುವುದು ಅತ್ಯಂತ ಸಂತೋಷವಾಗಿದ್ದು ಈಗಾಗಲೇ ಸರ್ಕಾರದಿಂದ ದೆಹಲಿಗೆ ತೆರಳಲು ರೈಲಿನ ವ್ಯವಸ್ಥೆ ಕಲ್ಪಿಸಲಾಗಿದ್ದು ರಾಜ್ಯದ ಎಲ್ಲಾ ವಿಭಾಗಗಳಿಂದ ಒಬ್ಬರಂತೆ ನಿಯೋಜಿಸಿರುವುದು ಹಾಗೂ ಅಮೃತ ಕಳಶದೊಂದಿಗೆ ಹೊಸದುರ್ಗದ ಪ್ರತಿನಿಧಿಯಾಗಿ ತೆರುತ್ತಿರುವುದು ನನಗೆ ಹೆಮ್ಮೆಯ ಸಂಗತಿ ಎಂದರು. ಈ ಸಂದರ್ಭದಲ್ಲಿ ಕಿರಿಯ ಆರೋಗ್ಯ ನಿರೀಕ್ಷಕರಾದ ಕಂದಾಯ ನಿರೀಕ್ಷಕರಾದ ಕುಮಾರ್.ಜಿ.ಎನ್, ಕಾಲೇಜು ವಿದ್ಯಾರ್ಥಿಗಳಾದ ಗಿರೀಶ್ ಮತ್ತು ದೇವರಾಜ್, ಹಾಗೂ ಪುರಸಭೆ ಸಿಬ್ಬಂದಿಗಳು, ಸದಸ್ಯರು ಹಾಜರಿದ್ದರು.

## ದೇವರೆಡ್ಡಿಹಳ್ಳಿ ವಿದ್ಯಾರ್ಥಿಗಳು ಸಿದ್ದಪಡಿಸಿದ ಮಾದರಿ ರಾಷ್ಟ್ರ ಮಟ್ಟಕ್ಕೆ ಆಯ್ಕೆ

» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ತಾಂತ್ರಿಕತೆಯಲ್ಲಿ ತನ್ನದೇಯಾದ ವೈವಿಧ್ಯತೆಯನ್ನು ಹೊಂದಿರುವ ಚಳ್ಳಕೆರೆ ತಾಲ್ಲೂಕಿನ ಗ್ರಾಮೀಣ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳು ಸಹ ವಿಜ್ಞಾನಕ್ಕೆ ಸಂಬಂಧಪಟ್ಟ ಹಲವಾರು ಪ್ರಯೋಗಗಳನ್ನು ನಡೆಸಿ ರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗುವ ಮೂಲಕ ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲೂ ಸಹ ವಿಜ್ಞಾನದ ನೈಪುಣ್ಯತೆ ಹೆಚ್ಚಿದೆ ಎಂಬುವುದನ್ನು ಸಾಬೀತು ಪಡಿಸಿದ್ದಾರೆ. ತಾಲ್ಲೂಕಿನ ದೇವರೆಡ್ಡಿಹಳ್ಳಿ ಮಾರುತಿ ಗ್ರಾಮಾಂತರ ಪ್ರೌಢಶಾಲೆಯ ವಿದ್ಯಾರ್ಥಿಗಳು ತಯಾರಿಸಿದ ಸೌರಶಕ್ತಿ ಬಳಸಿಕೊಂಡು ಯು–ಪಿನ್ ಕರ್ವ್‌ಗಳಲ್ಲಿ ವಾಹನಗಳ ರಸ್ತೆ ಸುರಕ್ಷತೆಯ ಎಚ್ಚರಿಕೆ ಮಾದರಿ ರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗಿದೆ. ಈ ಬಗ್ಗೆ ಮಾಹಿತಿ ನೀಡಿದ ಪ್ರೌಢಶಾಲೆಯ ಶಿಕ್ಷಕಿ ಮಮತದೇವಿ, ಕಳೆದ ಅ.28ರಂದು ಬೆಂಗಳೂರಿನಲ್ಲಿ ಟಾಟಾ ಪವರ್ ಸೋಲಾರ್ ಕಂಪನಿ ವತಿಯಿಂದ ರಾಜ್ಯಮಟ್ಟದ ಉರ್ಜಾ ಮೇಳ ವಿಜ್ಞಾನ ವಸ್ತು ಮಾದರಿ ಮತ್ತು ಬಿತ್ತಿಪತ್ರಗಳ ಪ್ರದರ್ಶನ ಮೇಳದಲ್ಲಿ ದೇವರೆಡ್ಡಿಹಳ್ಳಿ ಮಾರುತಿ ಪ್ರೌಢಶಾಲೆಯ ವಿದ್ಯಾರ್ಥಿಗಳು ತಯಾರಿಸಿದ ಯು–ಪಿನ್ ಕರ್ವ್‌ಗಳಲ್ಲಿ ವಾಹನಗಳ ರಸ್ತೆ ಸುರಕ್ಷತೆಯ ಎಚ್ಚರಿಕೆ ಮಾದರಿ ರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗಿದ್ದು, ನವದೆಹಲಿಯಲ್ಲಿ ನಡೆಯುವ ರಾಷ್ಟ್ರೀಯ ಸೋಲಾರ ಮೇಳದಲ್ಲಿ ಭಾಗವಹಿಸಲು ಆಯ್ಕೆಯಾಗಿರುತ್ತದೆ. ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿರುವ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ರಾಷ್ಟ್ರೀಯ ಮಟ್ಟದಲ್ಲಿ ಚಳ್ಳಕೆರೆ ಗ್ರಾಮದ ಪ್ರೌಢಶಾಲೆಯ ವಿದ್ಯಾರ್ಥಿಗಳ ಪ್ರಯೋಗ ಆಯ್ಕೆಯಾಗಿರುವುದು ಹೆಮ್ಮೆ ವಿಷಯವೆಂದರು. ಶಾಲೆಯ ಮುಖ್ಯ ಶಿಕ್ಷಕ ನಾಗರಾಜು, ಬಸವೇಶ್ವರ,ಪಿ.ಎಸ್.ಮಹಂತೇಶ್ ಮೆಚ್ಚುಗೆ ವ್ಯಕ್ತಪಡಿಸಿವೆ.



**ಪ್ರಮುಖ ಸುದ್ದಿ**

# ಹಾಲುರಾಮೇಶ್ವರಕ್ಕೆ ತಹಶಿಲ್ದಾರ್ ಧಿಡೀರ್ ಬೇಟಿ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ: ಮೂಲಭೂತವಾದ ಸೌಲಭ್ಯ ಹಾಗೂ ತೀರಾ ಅವ್ಯವಸ್ಥೆಯಿಂದ ಕೂಡಿದ್ದ ರಾಜ್ಯದ ಮನೆಮಾತಾಗಿರುವ ತಾಲೂಕಿನ ಪವಿತ್ರ ಕ್ಷೇತ್ರವಾದ ಶ್ರೀ ಹಾಲುರಾಮೇಶ್ವರ ಪುಣ್ಯ ಕ್ಷೇತ್ರಕ್ಕೆ ಇಲ್ಲಿನ ತಹಶಿಲ್ದಾರ್ ಹಾಗೂ ಮುಜುರಾಯಿ ಇಲಾಖೆಯ ಅಧಿಕಾರಿಯಾದ ತಿರುಪತಿಪಾಟೀಲ್ ಅವರು ಅವ್ಯವಸ್ಥೆಯ ಆಗರವಾಗಿದ್ದ ಶ್ರೀ ಕ್ಷೇತ್ರಕ್ಕೆ ಬೇಟಿ ನೀಡಿ ಪರಿಶೀಲಿಸಿದರು.

ಕಂದಾಯ ಇಲಾಖೆಯ ಆಡಳಿತ ಇಲ್ಲಿನ ಶಾಸಕ ಬಿ.ಜಿ.ಗೋವಿಂದಪ್ಪನವರ ಆದೇಶದಂತೆ ತಹಶಿಲ್ದಾರ್ ಮತ್ತು ಸಿಬ್ಬಂಧಿಯವರು ಧಿಡೀರ್ ಬೇಟಿ ಸುಮಾರು ನಾಲ್ಕು ಗಂಟೆಗಳ ಕಾಲ ಕ್ಷೇತ್ರವನ್ನೆಲ್ಲ ಒಮ್ಮೆ ಸುತ್ತಾಡಿ, ಅಲ್ಲಿನ ಸಮಸ್ಯೆಗಳ ಹಾಗೂ ಕ್ಷೇತ್ರದ ಸ್ಥಿತಿ ಗತಿಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಂಡು ಕ್ಷೇತ್ರ ಕೆಲವು ಮುಖ್ಯ ಸ್ಥಳಗಳಲ್ಲಿ ಇದ್ದ ತ್ಯಾಜ್ಯ ವಸ್ತುಗಳನ್ನ ಅಲ್ಲಯೇ ಬೆಂಕಿ ಇಡಿಸಿ ಸುಟ್ಟು ಹಾಕುವ ಮೂಲಕ ಆವರಣವನ್ನ ಸ್ವಚ್ಚಗೊಳಿಸಿದರು. ನಂತರ ಅಲ್ಲಲ್ಲಿ ವಿಪರೀತವಾಗಿ ಬಿದ್ದಿದ್ದ ಕಸ ಕಡ್ಡಿಯನ್ನ ಉಪಯೋಗಿಸಲು ಬಾರದೆ ಇರುವ ಬಟ್ಟೆ ಬರಿಗಳನ್ನ ಅಲ್ಲಿಂದ ವಿಲೀನಗೊಳಿಸಿ ಇನ್ನು ಮುಂದೆ ಈಗೆಯೇ ಸ್ವಚ್ಚವಾಗಿರಬೇಕು ಎಂದು ಅಲ್ಲಿನ ಸಿಬ್ಬಂಧಿಗೆ ಕಡಕ್ಕಾಗಿ ಸೂಚನೆ ನೀಡಿದರು.



ಸದ್ಯಕ್ಕೆ ಇಷ್ಟು ಸ್ವಚ್ಚವಾಗಿದೆ ನಾನು ಎರಡು ಮೂರು ದಿನಗಳು ಬಿಟ್ಟು ಮತ್ತೆ ಬರುತ್ತೇನೆ ನಾನು ಬಂದಾಗ ಕ್ಷೇತ್ರ ಸ್ವಚ್ಚಂಧವಾಗಿರಬೇಕು, ಗಲೀಜು ಶಿಸ್ತು ಬದ್ದತೆ ಕ್ಷೇತ್ರದ ಆವರಣದ ಸ್ವಚ್ಚತೆ ಎಲ್ಲವನ್ನೂ ಸಹಾ ಪರಿಶೀಲಿಸುತ್ತೇನೆ ಕ್ಷೇತ್ರಕ್ಕೆ ಬರುವ ಭಕ್ತರಿಗೆ ಯಾವುದೇ ರೀತಿಯಿಂದ ತೊಂದರೆಯಾಗಬಾರದು ಎಂಬ ಸೂಚನೆಯನ್ನ ನೀಡಿದರು.

ಕ್ಷೇತ್ರದಲ್ಲಿ ಯಾವುದೇ ಅಕ್ರಮಗಳು ನಡೆಯಬಾರದು,ಬಂದ ಭಕ್ತರಿಂದ ಹಣ ವಸೂಲಿ ಮಾಡುವುದಾಗಲಿ, ಕೆಲವರು ಬಂದು ರಾಜಕೀಯ ಮಾಡುವುದಾಗಲಿ, ಪಾರ್ಟಿ ಮಾಡುವುದಾಗಲಿ ಮಧ್ಯಪಾನ ಮಾಡುವುದಾಲಿ ಇವೆಲ್ಲವೂ ಸಹಾ ಕ್ಷೇತ್ರದ ಒಳಗೆ ಹೋರಗೆ ಹಾಗೂ ಕ್ಷೇತ್ರದ ಹಾಜು ಬಾಜಿನಲ್ಲಿ ನಡೆಯಬಾರದು ಇಂತಹ ವಿಷಯಗಳು ನಮ್ಮ ಗಮನಕ್ಕೆ ಬಂದದ್ದೆ

> ಸಂಯುಕ್ತ ಕರ್ನಾಟಕ ಪತ್ರಿಕೆ ಕ್ಷೇತ್ರದ ಬಗ್ಗೆ ಕಾಳಜಿ ವಹಿಸಿ ವಿಶೇಷ ವರದಿ ಮಾಡಿರುವಂತೆ ಇಲ್ಲಿ ಸಾಕಷ್ಟು ಅವ್ಯವಸ್ಥೆಯಾಗಿದೆ,ಇದನ್ನು ದಿನ ಕಳೆದಂತೆ ಭಕ್ತರ ಮನಸ್ಸಿಗೆ ಹಿಡಿಸುವಂತೆ ಕೆಲಸ ಕಾರ್ಯಗಳನ್ನು ಮಾಡಿಸುವ ಕೆಲಸ ಮಾಡುತ್ತೇನೆ, ಇಲ್ಲಿ ಸಿಬ್ಬಂಧಿಯ ಕೋರತೆ ಸಾಕಷ್ಟು ಎದ್ದು ಕಾಣುತಿದ್ದು ಸಿಬ್ಬಂಧಿಯನ್ನ ನೇಮಕ ಮಾಡಿಕೊಳ್ಳುವ ಬಗ್ಗೆ ವಿಚಾರ ಮಾಡಲಾಗುವುದು, ಜೋತೆಗೆ ಈ ಕ್ಷೇತ್ರಕ್ಕೆ ಕಮಿಟಿ ಇಲ್ಲದಿರುವುದೇ ಇಷ್ಟಕ್ಕೆಲ್ಲ ಕಾರಣವಾಗಿದೆ ಮುಂದಿನ ದಿನಗಳಲ್ಲಿ ಸದ್ಯದಲ್ಲಿಯೇ ಕಮಿಟಿ ರಚನೆ ಮಾಡುವುದಾಗಿ ಶಾಸಕರು ತಿಳಿಸಿದ್ದಾರೆ. ಇನ್ನು ಮುಂದೆ ಈ ಕ್ಷೇತ್ರದ ಸ್ಥಿತಿ-ಗತಿಯ ಬಗ್ಗೆ ಹಾಗೂ ಕ್ಷೇತ್ರದ ವೀಕ್ಷಣೆಗಾಗಿ ಪ್ರತಿ ಸೋಮವಾರ ಬೇಟಿ ನೀಡಿ ಪರಿಶೀಲಿಸಲಾಗುವುದು.ಕ್ಷೇತ್ರಕ್ಕೆ ಬರುವ ಭಕ್ತರಿಗೆ ಯಾರಿಂದಲಾದರೂ ಅಥವಾ ಯಾವುದೇ ಮೂಲಭೂತ ಸೌಲಭ್ಯಗಳ ವಿಷಯದಲ್ಲಿ ತೊಂದರೆಯಾದರೂ ಸಹಾ ತಕ್ಷಣವೇ ಕಂದಾಯ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತರಬೇಕು.
>
> » ತಿರುಪತಿಪಾಟೀಲ್. ತಹಶಿಲ್ದಾರ್, ಹೊಸದುರ್ಗ

ಆದರೆ ಅಂತವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂಬ ಎಚ್ಚರಿಕೆಯನ್ನ ನೀಡಿದರು.

ಕ್ಷೇತ್ರಕ್ಕೆ ಬೇಟಿ ನೀಡಿದ್ದ ತಹಶಿಲ್ದಾರ್ ಅವರು ದೂರವಾಣಿಯ ಮೂಲಕ ಇಲ್ಲಿನ ಪರುಸ್ಥಿತಿ ಸ್ಥಿತಿ ಗತಿಯ ಬಗ್ಗೆ ಶಾಸಕ ಬಿ.ಜಿ.ಗೋವಿಂದಪ್ಪವರಿಗೆ ದೂರವಾಣಿಯ ಮೂಲಕ ಸಂಪರ್ಕ ಮಾಡಿ ವಿವರವಾಗಿ ಮಾಹಿತಿ ನೀಡಿದರು. ಇಲ್ಲಿ ಬೀಗ ಹಾಕಲಾಗಿದ್ದ ಶೌಚಾಲಯ ಸೇರಿದಂತೆ ಭಕ್ತರ ಬಳಕೆಗೆ ಬೇಕಾಗುವಂತಹ ಹಲವಾರು ಕೊಠಡಿಗಳನ್ನ ಖುದ್ದಾಗಿ ಹೋಗಿ ತೆರವುಗೊಳಿಸಿ ಈ ಕ್ಷೇತ್ರಕ್ಕೆ ನಿತ್ಯವೂ ಸಹಾ ನೂರಾರು ಭಕ್ಯರು ಬರುತ್ತಾರೆ ಹೋಗುತ್ತಾರೆ ಅವರಿಗೆ ಈ ಎಲ್ಲಾ ಕೊಠಡಿಗಳ ಅವಶ್ಯಕತೆ ಇರುತ್ತದೆ ಇನ್ನು ಮುಂದೆ ಈತರಹ ಬೀಗ ಹಾಕಿಕೊಂಡು ನೀವು ಮನೆಯಲ್ಲಿದ್ದರೆ ನಾನು ಸಹಿಸುವುದಿಲ್ಲ ಎಂದು ಖಡಕ್ಕಾಗಿ ಹೇಳಿದರು. ಈ ಸಂಧರ್ಬದಲ್ಲಿ ರಾಜಸ್ವ ನಿರೀಕ್ಷಕರಾದ ನಟರಾಜ್,ಬಿಲ್‌ಕಲಕ್ಟರ್ ಲೋಕೇಶ್, ಗ್ರಾಮ ಆಡಳಿತಾಧಿಕಾರಿ ಚನ್ನಕೇಶವ ಹಾಗೂ ದೇವಸ್ಥಾನ ಸಿಬ್ಬಂಧಿ ಸೇರಿದಂತೆ ಸುತ್ತ ಮುತ್ತಲ ಗ್ರಾಮಸ್ಥರು ಮುಖಂಡುಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಗೌರಸಮುದ್ರ: ಬಿಸಾಕಿದ ಅನ್ನತಿಂದು 17 ಮೇಕೆ ಸಾವು



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಮಾರಮ್ಮ ದೇವಿ ಮರಿಪರಿಷೆ ಅ.24ರ ಮಂಗಳವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆದಿದ್ದು, ಈ ಸಂದರ್ಭದಲ್ಲಿ ಭಕ್ತಾದಿಗಳು ದೇವಸ್ಥಾನಕ್ಕೆ ಆಗಮಿಸಿ ಆಹಾರ ಸಿದ್ದಪಡಿಸಿ ಉಳಿದ ನಂತರ ಬಿಸಾಕಿದ ಅನ್ನ ವಿಷಯಾಗಿ ಅದನ್ನು ಸೇವಿಸಿದ ಸುಮಾರು 17 ಮೇಕೆಗಳು ಮೃತಪಟ್ಟ ಘಟನೆ ನಡೆದಿದೆ.
ಗೌರಸಮುದ್ರ ಗ್ರಾಮದ ನರಸಿಂಹಪ್ಪ ಎಂಬುವವರಿಗೆ ಸೇರಿದ ಮೇಕೆಗಳಾಗಿದ್ದು, ಎಂದಿನಂತೆ ಭಾನುವಾರ ತುಮಲು ಪ್ರದೇಶದಲ್ಲಿ ಬೆಳಗಿನಿಂದ ಸಂಜೆವರೆಗೂ ಮೇಕೆ ಓಡಾಡಿ ಅಲ್ಲಲ್ಲಿ ಬಿದಿದ್ದ ಅನ್ನವನ್ನು ಸೇವಿಸಿ ಸ್ವಲ್ಪ ಹೊತ್ತಿನಲ್ಲೇ ನಿತ್ರಾಣವಾಗಿ ಕುಸಿದು ಬಿದ್ದಿವೆ. ಕೂಡಲೇ ನರಸಿಂಹಪ್ಪ ಮತ್ತಿತರರು ಪಶುವೈದ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿ ಸ್ಥಳಕ್ಕೆ ಆಗಮಿಸಿದ ಪಶುವೈದ್ಯ ಇಲಾಖೆಯ ಅಧಿಕಾರಿ ಡಾ.ರೇವಣ್ಣ ಮತ್ತು ತಂಡ ಅನ್ನತಿಂದು ನಿತ್ರಾಣವಾಗಿ ಕುಸಿದ ಮೇಕೆಗಳಿಗೆ ಚಿಕಿತ್ಸೆ ನೀಡಲು ಮುಂದಾಗಿದ್ದು, ಚಿಕಿತ್ಸೆ ಆರಂಭಕ್ಕೂ ಮುನ್ನವೇ ಮೇಕೆಗಳು ಮೃತಪಟ್ಟಿರುತ್ತವೆ.

### ರೆಡ್ಡಿಹಳ್ಳಿ: ಅಕ್ರಮವಾಗಿ ಮರಳು ಸಾಗಾಟ ಮಾಡುತ್ತಿದ್ದ ಟ್ರ್ಯಾಕ್ಟರ್ ವಶ



» ಚಳ್ಳಕೆರೆ

ತಾಲ್ಲೂಕಿನ ರೆಡ್ಡಿಹಳ್ಳಿ ಗ್ರಾಮದ ಹಳ್ಳದ ಬಳಿ ಕಾನೂನು ಬಾಹಿರವಾಗಿ ಅದೇ ಗ್ರಾಮದ ಪಾಪಣ್ಣ(26) ಎಂಬ ವ್ಯಕ್ತಿ ಟ್ರ್ಯಾಕ್ಟರ್‌ಗೆ ಮರಳು ತುಂಬಿ ಸಾಗಾಟ ಮಾಡುವ ಸಂದರ್ಭದಲ್ಲಿ ಪೊಲೀಸರ ಕೈಗೆ ಸಿಕ್ಕಿ ಬಿದಿದ್ದಾನೆ. ಈ ಬಗ್ಗೆ ಮಾಹಿತಿ ನೀಡಿದ ಪಿಎಸ್‌ಐ ಜೆ.ಶಿವರಾಜು, ಖಚಿತ ವರ್ತಮಾನದ ಮೇರೆಗೆ ಸಿಬ್ಬಂದಿಯೊಂದಿಗೆ ರೆಡ್ಡಿಹಳ್ಳಿ ಗ್ರಾಮದ ಹಳ್ಳದ ಬಳಿ ಅದೇ ಗ್ರಾಮದ ಪಾಪಣ್ಣ ಎಂಬ ವ್ಯಕ್ತಿ ಅಕ್ರಮವಾಗಿ ಟ್ರ್ಯಾಕ್ಟರ್‌ಗೆ ಮರಳು ತುಂಬುತ್ತಿದ್ದು, ಕೂಡಲೇ ಸಿಬ್ಬಂದಿ ವರ್ಗ ಟ್ರ್ಯಾಕ್ಟರ್ ಸಹಿತ ಮಾಲನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಸಾರ್ವಜನಿಕರು ಇಂತಹ ಅಕ್ರಮ ಸಾಗಾಟದ ಬಗ್ಗೆ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಅವರು ಮನವಿ

### ಬಾಲಕ ಕಾಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಮಟ್ಟಿಕಲ್ಲಹಳ್ಳಿ ಗ್ರಾಮ ನಿವಾಸಿ ಅಜಯ್ (17) ವರ್ಷ ಎಂಬುವರು 2023ರ ಅಕ್ಟೋಬರ್ 8ರಂದು ಕಾಣೆಯಾಗಿರುವ ಪ್ರಕರಣ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಬಾಲಕನ ಚಹರೆ ಇಂತಿದೆ. ಅಜಯ್ (17 ವರ್ಷ) ತಂದೆ ಓಬಯ್ಯ, 5.5 ಅಡಿ ಎತ್ತರ, ಕಪ್ಪು ಬಣ್ಣ, ಕೋಲು ಮುಖ, ತಲೆಯಲ್ಲಿ ಕೂದಲು ಜಾಸ್ತಿ ಬಿಟ್ಟಿರುತ್ತಾನೆ, ಬಲಕಿವಿಗೆ ರಿಂಗ್ ಧರಿಸಿರುತ್ತಾನೆ. ಕಾಣೆಯಾದ ಸಮಯದಲ್ಲಿ ರೆಡ್ ಟೀ ಶರ್ಟ್, ಕಪ್ಪು ಬಣ್ಣದ ಜೀನ್ಸ್‌ಪ್ಯಾಂಟ್ ಧರಿಸಿರುತ್ತಾನೆ.ಈ ಮೇಲ್ಕಂಡ ಬಾಲಕನ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ. 1 ರಂದು ಹಿರಿಯ ನಾಗರಿಕರ ದಿನಾಚರಣೆ

» ದಾವಣಗೆರೆ

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ನವಂಬರ್ 1 ರಂದು ಶ್ರೀ ಗುರು ತಿಪ್ಪೇರುದ್ರಸ್ವಾಮಿ ಟ್ರಸ್ಟ್, ಸಿದ್ದಾರೂಢ ವೃದ್ಧಾಶ್ರಮ, ಬಸವಾಪಟ್ಟಣ, ಚನ್ನಗಿರಿ ತಾಲ್ಲೂಕು ಇಲ್ಲಿ ಹಿರಿಯ ನಾಗರಿಕರ ದಿನಾಚರಣೆ ಹಾಗೂ ಹಿರಿಯ ನಾಗರಿಕರಿಗೆ ಕಾನೂನಿನ ಅರಿವು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

# ಭಾವಸಾರ ಕ್ಷತ್ರೀಯ ಸಮಾಜ ಶಿಕ್ಷಣಕ್ಕೆ ಒತ್ತು ನೀಡಿ

» ಚಿತ್ರದುರ್ಗ

ಸಾಮಾಜಿಕ, ರಾಜಕೀಯ, ಆರ್ಥಿಕ ಸೇರಿದಂತೆ ಬಹುತೇಕ ಕ್ಷೇತ್ರಗಳಲ್ಲಿ ಹಿಂದುಳಿದಿರುವ ಭಾವಸಾರ ಕ್ಷತ್ರೀಯ ಸಮಾಜವು ರಾಜ್ಯದಲ್ಲಿ ಅಗತ್ಯವಿರುವ ಸ್ಥಾನಮಾನಗಳನ್ನು ಪಡೆದುಕೊಳ್ಳಲು ಶಿಕ್ಷಣ ಮತ್ತು ಸಂಘಟನೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಅಖಿಲ ಭಾರತ ಭಾವಸಾರ ಕ್ಷತ್ರೀಯ ಮಹಾಸಭಾದ ರಾಜ್ಯಾಧ್ಯಕ್ಷ ಶ್ರೀನಿವಾಸ ಪಿಸ್ಸೆ ಅವರು ಕರೆ ನೀಡಿದರು.

ಚಿತ್ರದುರ್ಗದ ಭಾವಸಾರ ಕ್ಷತ್ರೀಯ ಕಲ್ಯಾಣ ಮಂಟಪದಲ್ಲಿ, ಭಾನುವಾರದಂದು ಭಾವಸಾರ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಮಾಜಕ್ಕಾಗಿ ದುಡಿಯುತ್ತಿರುವ ಗಣ್ಯರಿಗೆ ಸನ್ಮಾನಿಸುವ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಭಾವಸಾರ ಕ್ಷತ್ರೀಯ ಸಮಾಜದವರು ಬಹಳಷ್ಟು ಸಂಖ್ಯೆಯಲ್ಲಿದ್ದರೂ, ರಾಜಕೀಯ, ಸಾಮಾಜಿಕ ಮುಂತಾದ ಕ್ಷೇತ್ರಗಳಲ್ಲಿ ಸ್ಥಾನಮಾನಗಳನ್ನು ಪಡೆಯಲು ಸಾಧ್ಯವಾಗಿಲ್ಲ, ಸಮಾಜದವರು ಬಟ್ಟೆ ಹೊಲಿಯುವವೃತ್ತಿಯನ್ನೇ ಮಾಡುತ್ತ, ಶಿಕ್ಷಣ ಕ್ಷೇತ್ರವನ್ನು ನಿರ್ಲಕ್ಷಿಸಿದ ಪರಿಣಾಮವಾಗಿ ಸಮಾಜ ಹಿಂದುಳಿದಿದೆ. ಆದರೆ ಈಗ ಪರಿಸ್ಥಿತಿ ಬದಲಾಗಿದೆ. ಹೀಗಾಗಿ ಭಾವಸಾರ ಕ್ಷತ್ರೀಯ ಸಮಾಜದವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು,



ಅದೇ ರೀತಿ ಸಂಘಟಿತರೂ ಆಗಬೇಕು. ಸಮಾಜದ ಹಲವು ಕೈಂಕರ್ಯಗಳಲ್ಲಿ ಪಾಲ್ಗೊಳ್ಳಬೇಕು, ಒಬ್ಬರಿಗೊಬ್ಬರು ಬೆಂಬಲ ನೀಡುವಂತಾಗಬೇಕು. ಸರ್ಕಾರದ ಗಮನ ಸೆಳೆಯುವ ರೀತಿಯಲ್ಲಿ ಸಂಘಟನಾ ಚಟುವಟಿಕೆಗಳನ್ನು ಕೈಗೊಳ್ಳಬೇಕು, ಆಗ ಮಾತ್ರ ಸರ್ಕಾರದಲ್ಲಿ ಸ್ಥಾನಮಾನಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದರು.

ಅಖಿಲಭಾರತ ಭಾವಸಾರ ಕ್ಷತ್ರೀಯ ಮಹಾಸಭಾದ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ನಾಡಿನಾದ್ಯಂತ ಹಮ್ಮಿಕೊಳ್ಳಲಾಗುತ್ತದೆ. ಇಂತಹ ಕಾರ್ಯಕ್ರಮಗಳಲ್ಲಿ ಸಮಾಜಬಾಂಧವರು ಭಾಗವಹಿಸಬೇಕು, ಆಗಮಾತ್ರ ಸಮಾಜದಲ್ಲಿ ದೊರೆಯುವ ವಿವಿಧ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆಯಲು ಸಾಧ್ಯ. ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಸರ್ಕಾರದ ಹಲವು ಯೋಜನೆಗಳು ಜಾರಿಯಲ್ಲಿವೆ, ಸಮಾಜದವರು ಇದರ ಬಗ್ಗೆ ಮಾಹಿತಿ ಪಡೆಯುವ ಗೋಜಿಗೆ ಹೋಗುವುದೇ ಇಲ್ಲ. ಹೀಗಾಗಿ ಯೋಜನೆಗಳ ಸೌಲಭ್ಯ ಪಡೆಯಲು ಸಾಧ್ಯವಾಗುತ್ತಿಲ್ಲ, ಸಮಾಜದವರು ಆರ್ಥಿಕವಾಗಿ ಸಬಲರೂ ಆಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಭಾವಸಾರ ಕ್ಷತ್ರೀಯ ಸಮಾಜದ ಸಾವಿರಾರು ಪದವೀಧರರಿದ್ದಾರೆ, ಆದರೆ ಬಹುತೇಕರು ಪದವೀಧರ ಕ್ಷೇತ್ರದ ವಿಧಾನಸಭಾ ಪರಿಷತ್‌ಗೆ ನಡೆಯುವ ಚುನಾವಣೆಯಲ್ಲಿ ಮತ ಚಲಾಯಿಸುವ ಹಕ್ಕು ಪಡೆದಿಲ್ಲ, ಏಕೆಂದರೆ ನೊಂದಣಿ ಮಾಡಿಸಿಲ್ಲ. ಹೀಗಾಗಿ ತಪ್ಪದೆ ಸಮಾಜದ ಎಲ್ಲ ಪದವೀಧರರು ನೊಂದಣಿ ಮಾಡಿಸಿಕೊಳ್ಳಬೇಕು, ಹೆಚ್ಚಿನ ಸಂಖ್ಯೆಯಲ್ಲಿ ಪದವೀಧರ ಮತದಾರರಿದ್ದರೆ, ಚುನಾವಣೆ ಸಂದರ್ಭದಲ್ಲಿ ನಮ್ಮ ಸಮಾಜವನ್ನೂ ಕೂಡ ಗುರುತಿಸುತ್ತಾರೆ ಎಂದರು.

ಭಾವಸಾರ ಕ್ಷತ್ರೀಯ ಸಮಾಜದ ಅಧ್ಯಕ್ಷ ಶ್ಯಾಮರಾವ್ ಮುಸಳೆ ಅವರು ಮಾತನಾಡಿ, ನಗರದಲ್ಲಿ ಭಾವಸಾರ ಕ್ಷತ್ರೀಯ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡುವ ಕಾರ್ಯಕ್ರಮವನ್ನು ಕಳೆದೆರಡು ವರ್ಷಗಳಿಂದ ಮಾಡಲಾಗುತ್ತಿದೆ, ಇದು ಇತರೆ ವಿದ್ಯಾರ್ಥಿಗಳಿಗೂ ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನ ನೀಡಲು ಸಹಕಾರಿಯಾಗಿದೆ. ಇಂತಹ ಕಾರ್ಯಕ್ರಮಗಳಿಗೆ ಭಾವಸಾರ ಕ್ಷತ್ರೀಯ ಸಮಾಜ ಬಾಂಧವರು ಹೆಚ್ಚಿನ ರೀತಿಯಲ್ಲಿ ಧನ ಸಹಾಯ ಮಾಡುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ನಗರ ಹಾಗೂ ಗ್ರಾಮೀಣ ಪ್ರದೇಶಲ್ಲಿನ ಭಾವಸಾರ ಕ್ಷತ್ರೀಯ ಸಮಾಜದ ಎ□□ಎ□□ಎ□□ಸಿ, ಪಿಯುಸಿ ಹಾಗೂ ಪದವಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಅಲ್ಲದೆ ಆ□□ಟಿಇ ಕೋಟಾದಡಿ ಶಾಲೆಗಳಿಗೆ ಪ್ರವೇಶ ಪಡೆದ ಹಾಗೂ ಸರ್ಕಾರಿ ಶಾಲೆಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಸ್ಕೂಲ್ ಬ್ಯಾಗ್ ಗಳನ್ನು ಇದೇ ಸಂದರ್ಭದಲ್ಲಿ ವಿತರಿಸಲಾಯಿತು.

ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಹಾಗೂ ಸಮಾಜಕ್ಕಾಗಿ ಗಣನೀಯ ಸೇವೆ ಸಲ್ಲಿಸುತ್ತಿರುವ ಚಿತ್ರದುರ್ಗದ ಸಿ.ಟಿ. ವಾಸುದೇವರಾವ್ ಮುಸಳೆ, ಪರಮೇಶ್ವರ ರಾವ್ ನಾಜರೆ, ಗಣೇಶ್ ಮೂರ್ತಿ ಅಂಬೇಕರ್, ತುಕಾರಾಂರಾವ್ ಬಿ.ವಿ., ಹಾಗೂ ಎಂ.ವಿ. ವಿನಾಯಕ ಮುಸಳೆ ಅವರನ್ನು ಭಾವಸಾರ ಕ್ಷತ್ರೀಯ ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮಮತಾ ಬೇದ್ರೆ, ಶ್ಯಾಮರಾವ್ ಮುಸಳೆ, ನಾಗರಾಜ್ ಬೇದ್ರೆ, ಶ್ರೀನಾಥ್ ಬೇದ್ರೆ ಸೇರಿದಂತೆ ಸಮಾಜದ ವಿವಿಧ ಪದಾಧಿಕಾರಿಗಳು, ಸಮಾಜ ಬಾಂಧವರು ಪಾಲ್ಗೊಂಡಿದ್ದರು.

# ಸಂಶೋಧಕ ಡಾ.ಬಿ.ರಾಜಶೇಖರಪ್ಪನವರಿಗೆ ಸನ್ಮಾನ


» ಚಿತ್ರದುರ್ಗ

ಇತಿಹಾಸ ಅಕಾಡೆಮಿಯ ಅತ್ಯುನ್ನತ ಇತಿಹಾಸ ಸಂಸ್ಕೃತಿಶ್ರೀಪ್ರಶಸ್ತಿಗೆಭಾಜನರಾಗಿರುವಚಿತ್ರದುರ್ಗದ ಸಂಶೋಧಕ ಡಾ.ಬಿ.ರಾಜಶೇಖರಪ್ಪನವರನ್ನು ಅವರ ನಿವಾಸದಲ್ಲಿ ಕೋಟೆ ವಾಯುವಿಹಾರಿಗಳ ಸಂಘದಿಂದ ಸನ್ಮಾನಿಸಲಾಯಿತು.

ಬಿ.ರಾಜಶೇಖರಪ್ಪನವರನ್ನು ಸನ್ಮಾನಿಸಿ ಮಾತನಾಡಿದ ಕೋಟೆ ವಾಯುವಿಹಾರಿಗಳ ಸಂಘದ ಅಧ್ಯಕ್ಷ ಆರ್.ಸತ್ಯಣ್ಣ ಸಂಶೋಧನೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ

ಬಿ.ರಾಜಶೇಖರಪ್ಪನವರು ಇನ್ನು ಹೆಚ್ಚು ಸಂಶೋಧನೆಗಳನ್ನು ಕೈಗೊಂಡು ಇತಿಹಾಸಕ್ಕೆ ನಿರಂತರ ಸೇವೆ ಸಲ್ಲಿಸುವಂತಾಗಲಿ. ಇವರ ಸೇವೆಯನ್ನು ಗುರುತಿಸಿ ಇತಿಹಾಸ ಅಕಾಡೆಮಿ ರಾಜ್ಯ ಮಟ್ಟದ ಪ್ರಶಸ್ತಿ ಹಾಗೂ ಒಂದು ಲಕ್ಷ ರೂ. ನೀಡಿ ಗೌರವಿಸುತ್ತಿರುವುದು ಚಿತ್ರದುರ್ಗಕ್ಕೆ ಸಂದ ಕೀರ್ತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ಬಿ.ರಾಜಶೇಖರಪ್ಪವರು ಅಪಾರ ಅಭಿಮಾನಿಗಳು ನನ್ನ ಮೇಲೆ ಗೌರವವಿಟ್ಟು ಸನ್ಮಾನಿಸುತ್ತಿರುವುದಕ್ಕೆ ಚಿರಋಣಿಯಾಗಿದ್ದೇನೆ. ನ.7 ರಂದು ಇತಿಹಾಸ ಅಕಾಡೆಮಿ ಪಾವಗಡದಲ್ಲಿ ಪ್ರದಾನ ಮಾಡಲಿರುವ ಇತಿಹಾಸ ಸಂಸ್ಕೃತಿಶ್ರೀ ಪ್ರಶಸ್ತಿ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ. ಸ್ಮಾರಕಗಳ



ಸಂರಕ್ಷಣಾ ಸಮಿತಿಯನ್ನು ಪುನರ್ ರಚಿಸುವ ಅಗತ್ಯವಿದೆ. ಅಭಿಮಾನಿಗಳ ನಿರೀಕ್ಷೆಗೆ ತಕ್ಕಂತೆ ಸದಾ ಸಂಶೋಧನೆಯಲ್ಲಿ ತೊಡಗಿರುತ್ತೇನೆಂದು ಹೇಳಿದರು.ಮಡಿವಾಳ ಸಮಾಜದ ಜಿಲ್ಲಾಧ್ಯಕ್ಷ ಬಿ.ರಾಮಜ್ಜ ಮಾತನಾಡಿ ಸಂಶೋಧನೆಯ ಮೂಲಕವೇ ಮನೆ ಮಾತಾಗಿರುವ ಡಾ.ಬಿ.ರಾಜಶೇಖರಪ್ಪನವರಿಗೆ ಇತಿಹಾಸ ಅಕಾಡೆಮಿ ನೀಡುವ ಅತ್ಯುನ್ನತ ಇತಿಹಾಸ ಸಂಸ್ಕೃತಿಶ್ರೀ ಪ್ರಶಸ್ತಿ ಸಿಕ್ಕಿರುವುದು ಅಭಿಮಾನಿಗಳಲ್ಲಿ ಸಂತಸ ಮೂಡಿಸಿದೆ. ಇನ್ನು ಹೆಚ್ಚು ಕಾಲ ಸಂಶೋಧನೆಯಲ್ಲಿ ತೊಡಗಿಕೊಳ್ಳುವಂತೆ ಭಗವಂತ ಶಕ್ತಿ ನೀಡಲಿ ಎಂದು ಶುಭ ಹಾರೈಸಿದರು. ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷ ಡಿ.ಗೋಪಾಲಸ್ವಾಮಿ ನಾಯಕ ಮಾತನಾಡುತ್ತ ಇತಿಹಾಸ ಸಂಸ್ಕೃತಿ ಪ್ರಶಸ್ತಿ ಸಿಕ್ಕಿರುವುದು ನಿಮ್ಮ ಸಂಶೋಧನೆಗೆ ತಕ್ಕ ಫಲ. ಮುಂದಿನ ದಿನಗಳಲ್ಲಿ ಇನ್ನು ಉನ್ನತ ಮಟ್ಟದ ಪ್ರಶಸ್ತಿಗಳು ಲಭಿಸಲಿ ಎಂದು ಆಶಿಸಿದರು.ಇಂದೂಶೇಖರ್, ಶ್ರೀಮತಿ ಯಶೋಧ ಬಿ.ರಾಜಶೇಖರಪ್ಪ ಈ ಸಂದರ್ಭದಲ್ಲಿದ್ದರು.

## ಪತಂಜಲಿ ಯೋಗ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನಪ್ಪ ನಿಧನಕ್ಕೆ ಸವಿನೆನಪು



» ಚಿತ್ರದುರ್ಗ

ಪತಂಜಲಿ ಯೋಗ ಸಮಿತಿಯ ಅಧ್ಯಕ್ಷ ಮಲ್ಲಿಕಾರ್ಜುನಪ್ಪ ಹಾಗೂ ನರಹರಿ ಟ್ರೇಡರ್‍ಸ್ ಮಾಲೀಕ ರವಿ ಜಿ. ಇವರುಗಳ ನಿಧನಕ್ಕೆ ಆಡುಮಲ್ಲೇಶ್ವರ ಸಮೀಪವಿರುವ ಸದ್ಗುರು ಸೇವಾಶ್ರಮದಲ್ಲಿ ಭಾನುವಾರ ಸವಿನೆನಪು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಅಂಚೆ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯ ನಂತರ ಪತಂಜಲಿ ಯೋಗ ಸಮಿತಿಯನ್ನು ಆರಂಭಿಸಿ ಜಿಲ್ಲೆಯಾದ್ಯಂತ ಯೋಗ ಶಿಬಿರಗಳನ್ನು ನಡೆಸಿದ ಮಲ್ಲಿಕಾರ್ಜುನಪ್ಪನವರ ನಿಧನದಿಂದ ಯೋಗ ಕಲಿಯುತ್ತಿದ್ದವರಿಗೆ ಅಪಾರ ನಷ್ಟವಾಗಿದೆ. ಎಲ್ಲೆಡೆ ಯೋಗ ಶಿಬಿರಗಳನ್ನು ನಡೆಸಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಸಾರ್ವಜನಿಕರಲ್ಲಿ ಆಸಕ್ತಿ ಮೂಡಿಸುತ್ತಿದ್ದ ಮಲ್ಲಿಕಾರ್ಜುನಪ್ಪನವರ ಆತ್ಮಕ್ಕೆ ಚಿರಶಾಂತಿಯನ್ನು ಭಗವಂತ ಕರುಣಿಸಲಿ ಎಂದು ಅವರ ಅಪಾರ ಶಿಷ್ಯಂದಿರು ಪ್ರಾರ್ಥಿಸಿದರು. ನರಹರಿ ಟ್ರೇಡರ್‍ಸ್ ಮಾಲೀಕ ರವಿ ಜಿ.ಇವರುಗಳು ಯೋಗಗುರು ಮಲ್ಲಿಕಾರ್ಜುನಪ್ಪನವರಿಗೆ ಬೆನ್ನುಲುಬಾಗಿ ನಿಂತು ಎಲ್ಲಾ ರೀತಿಯಲ್ಲಿಯೂ ಸಹಕರಿಸುತ್ತಿದ್ದರು. ಅವರ ಅಗಲಿಕೆಯೂ ಎಲ್ಲರ ಮನಸ್ಸಿಗೆ ನೋವುಂಟಾಗಿದೆ. ಆತ್ಮಕ್ಕೆ ಶಾಂತಿ ಕರುಣಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿದರು.

## ದಾವಣಗೆರೆ ಜಿಲ್ಲಾಡಳಿತದಿಂದ ನ.1 ರಂದು ಕರ್ನಾಟಕ ರಾಜ್ಯೋತ್ಸವ

» ದಾವಣಗೆರೆ

ಜಿಲ್ಲಾಡಳಿತದ ವತಿಯಿಂದ ನವೆಂಬರ್ ನ.1 ರ ಬುಧವಾರ ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ರಾಷ್ಟ್ರಧ್ವಜಾರೋಹಣ ಜರುಗಲಿದೆ. ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವದ ಸಂದೇಶ ನೀಡಲಿದ್ದಾರೆ.ಇದಕ್ಕೂ ಮುನ್ನ ಬೆಳಿಗ್ಗೆ 8.30 ಕ್ಕೆ ಸರ್ಕಾರಿ ಬಾಲಕರ ಪ್ರೌಢಶಾಲಾ ಮೈದಾನದ ಆವರಣದಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮೆರವಣಿಗೆಗೆ ಚಾಲನೆ ನೀಡಲಾಗುವುದು. ಕಲಾ ತಂಡಗಳೊಂದಿಗೆ ಮೆರವಣಿಗೆಯು ಮಹಾನಗರಪಾಲಿಕೆ ಮುಂಭಾಗದಿಂದ ಗಾಂಧಿ ವೃತ್ತ, ಅಶೋಕ ರಸ್ತೆ, ಜಯದೇವ ವೃತ್ತ, ವಿದ್ಯಾರ್ಥಿ ಭವನದ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣದ ತಲುಪಲಿದೆ. ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದ ಡಾ.ಜಿ.ಎಂ.ಸಿದ್ದೇಶ್ವರ, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ, ರವಿಕುಮಾರ್.ಎನ್, ತೇಜಸ್ವಿನಿಗೌಡ, ಎಸ್. ಎಲ್.ಭೋಜೇಗೌಡ, ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಡಾ. ವೆಂಕಟೇಶ್, ಎಸ್‌ಪಿ ಉಮಾ ಪ್ರಶಾಂತ್, ಉಪಸ್ಥಿತರಿರುವರು.

**ಪ್ರಮುಖ ಸುದ್ದಿ**

# ಎಪಿಎಂಸಿ ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ರಜತ ವರ್ಷಾಚರಣೆ

» ಚಿತ್ರದುರ್ಗ

ಚಿತ್ರದುರ್ಗದ ಎ.ಪಿ.ಎಂ.ಸಿ. ಆವರಣದಲ್ಲಿ ಕೃಷಿ ತಂತ್ರಜ್ಞರ ಸಂಸ್ಥೆ ಸ್ಥಾಪನೆಯಾಗಲು ಕೃಷಿ ವಿಶ್ವವಿದ್ಯಾಲಯ ಬೆಂಗಳೂರಿನ ನಿವೃತ್ತ ವಿಸ್ತರಣಾ ನಿರ್ದೇಶಕ ಡಾ.ವಿ.ವೀರಭದ್ರಯ್ಯ ಹಾಗೂ ಕೆ.ಹೆಚ್.ಸೀತಾರಾಮರೆಡ್ಡಿ ಇವರುಗಳೆ ಕಾರಣ ಎಂದು ಮರ್ಚೆಂಟ್ಸ್ ಸೌಹಾರ್ದ ಸಹಕಾರ ಬ್ಯಾಂಕಿನ ಅಧ್ಯಕ್ಷ ಎಸ್.ಆರ್.ಲಕ್ಷ್ಮಿಕಾಂತರೆಡ್ಡಿ ಶ್ಲಾಘಿಸಿದರು.

ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ರಜತ ವರ್ಷಾಚರಣೆ ಹಾಗೂ ವಿಶ್ವ ಆಹಾರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಚಿತ್ರದುರ್ಗದಲ್ಲಿ ಕೃಷಿ ತಂತ್ರಜ್ಞರ ಸಂಸ್ಥೆ ಸ್ಥಾಪನೆಯಾಗಲು ಅನೇಕರ ಪರಿಶ್ರಮವಿದೆ. ಅದು ಈಗಿನ ಸದಸ್ಯರುಗಳಿಗೆ ಗೊತ್ತಿಲ್ಲ. ಇಲ್ಲಿ ನಿರಂತರವಾಗಿ ಅನೇಕ ತರಬೇತಿ ವಿಚಾರ ಸಂಕಿರಣಗಳು ನಡೆಯುತ್ತಿರುತ್ತವೆ. ಹಾಗಾಗಿ ಕೃಷಿ ತಂತ್ರಜ್ಞರ ಸಂಸ್ಥೆಯಿಂದ ರೈತರಿಗೆ ಅನೇಕ ಉಪಯುಕ್ತ ಮಾಹಿತಿಗಳು ಸಿಗುತ್ತಿವೆ ಎಂದು ಹೇಳಿದರು.

ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷೆ ಹಾಗೂ ಕೃಷಿ ಇಲಾಖೆಯ ನಿವೃತ್ತ ನಿರ್ದೇಶಕಿ ಶ್ರೀಮತಿ ಸಿ.ಎನ್.ನಂದಿನಿಕುಮಾರಿ ಮಾತನಾಡಿ ಶುದ್ದ ನೀರು ಮತ್ತು ಪೌಷ್ಠಿಕಾಂಶವುಳ್ಳ ಆಹಾರ ಪ್ರತಿಯೊಬ್ಬರಿಗೂ ಸಿಗಬೇಕು.




ಬೋರ್‌ವೆಲ್‌ಗಿಂತ ಮಳೆ ನೀರು ಶ್ರೇಷ್ಠವಾದುದು. ಆದ್ದರಿಂದ ಮಳೆ ನೀರನ್ನು ವ್ಯರ್ಥವಾಗಿ ಹರಿದು ಹೋಗಲು ಬಿಡದೆ ಬಳಸುವ ಜಾಗೃತಿಯನ್ನು ಎಲ್ಲರಲ್ಲೂ ಮೂಡಿಸಬೇಕಿದೆ ಎಂದು ನೀರಿನ ಮಹತ್ವ ತಿಳಿಸಿದರು.

ಆಹಾರಕ್ಕೆ ಕೊರತೆಯಾಗಲಾರದು. ಆದರೆ ಮುಂದೊಂದು ದಿನ ನೀರಿಗಾಗಿ ಯುದ್ದವಾದರೂ ಆಶ್ಚರ್ಯವಿಲ್ಲ. ಮಣ್ಣು ಮತ್ತು ನೀರಿನ ಸಂರಕ್ಷಣೆ ಮುಖ್ಯ. ಇಲ್ಲದಿದ್ದರೆ ಮುಂದಿನ ಪೀಳಿಗೆ ಶಪಿಸುವಂತಾಗುತ್ತದೆ. ನೈಸರ್ಗಿಕವಾಗಿ ದೊರೆಯುವ ಸಂಪತ್ತನ್ನು ಇತಿಮಿತವಾಗಿ ಬಳಸಿ ಮುಂದಿನ ಪೀಳಿಗೆಗೆ ಉಳಿಸಬೇಕಿದೆ. ಚಿತ್ರದುರ್ಗದಲ್ಲಿ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ಅತ್ಯುತ್ತಮವಾದ ಕೆಲಸ ಮಾಡಿಕೊಂಡು ಬರುತ್ತಿದೆ. ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕಗಳು ಸಿಗಬೇಕು. ಆಗ ರೈತನ ಬೆವರಿಗೆ ತಕ್ಕ ಫಲ ಸಿಗುತ್ತದೆ. ಕಳಪೆ ಗುಣಮಟ್ಟದ ಬೀಜ, ರಸಗೊಬ್ಬರಗಳನ್ನು ಬಳಸಿದಾಗ ಕೈಗೆ ಬೆಳೆ ಬಾರದೆ ನಷ್ಟ ಅನುಭವಿಸಬೇಕಾಗುತ್ತದೆ. ಹಾಗಾಗಿ ಕೀಟನಾಶಕ, ಬಿತ್ತನೆ ಬೀಜ, ರಸಗೊಬ್ಬರ ಬಳಕೆ ಬಗ್ಗೆ ಲೈಸೆನ್ಸ್ ಪಡೆಯಲು ಇಂತಹ ತರಬೇತಿಗಳು ಸಹಕಾರಿಯಾಗಲಿವೆ ಎಂದರು. ಅಂತರ್ಜಲ ಹಾಗೂ ಮಳೆನೀರು ಕೊಯ್ಲು ತಜ್ಞ ಎನ್.ಜೆ.ದೇವರಾಜರೆಡ್ಡಿ ಮಾತನಾಡುತ್ತ ಜಲವೇ ಜೀವ, ನೀರಿಲ್ಲದ ಜೀವನ, ನೀರಿಲ್ಲದ ಜಗತ್ತನ್ನು ಊಹಿಸಿಕೊಳ್ಳುವುದು ಕಷ್ಟ. ಶೇ.97.5 ರಷ್ಟು ಉಪ್ಪು ನೀರು, ಶೇ.2.5 ರಷ್ಟು ಮಾತ್ರ ಸಿಹಿನೀರಿನ ಲಭ್ಯವಿದೆ. ಬೇರೆ ಬೇರೆ ಹೆಸರುಗಳಿಂದ ಕರೆಯಲಾಗುತ್ತಿರುವ ನೀರು ಇಂದಿನ ಮಾರುಕಟ್ಟೆಯಲ್ಲಿ ಮಾರಾಟದ ವಸ್ತುವಾಗಿರುವುದು ಅತ್ಯಂತ ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು. ರೂಪಾಂತರಗೊಂಡಿರುವ ಬಾವಿ ನೀರು, ಕೆರೆ ನೀರು, ನದಿ ನೀರು ಈಗ ಬಾಟಲ್ ನೀರಿಗೆ ಬಂದು ನಿಂತಿದೆ. ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ನೀರನ್ನು ಸುರಕ್ಷಿತವೆಂದು ಕರೆಯಲು ಹೇಗೆ ಸಾಧ್ಯ? ಮೆಗ್ನಿಷಿಯಂ, ಕ್ಯಾಲ್ಸಿಯಂ, ಐರನ್ ಬೋರ್ ನೀರಿನಲ್ಲಿ ಮಿತಿಮೀರಿದೆ. ಕಾರ್ಖಾನೆ, ಚರಂಡಿ ಪಕ್ಕದ ತ್ಯಾಜ್ಯ, ನದಿ ಪಕ್ಕದಲ್ಲಿನ ಇಂಡಸ್ಟ್ರಿಸ್‌ಗಳು ನೀರನ್ನು ಕಲುಷಿತಗೊಳಿಸುತ್ತಿವ. ಸೇವಿಸುವ ತರಕಾರಿ, ಹಾಲಿನಲ್ಲಿಯೂ ಅಧಿಕ ಮೆಟಲ್‌ಗಳು ತುಂಬಿಕೊಂಡಿವೆ. ಕಾವೇರಿ ನದಿಯೂ ಕಲುಷಿತಗೊಂಡಿದೆ. ಶುದ್ದ ನೀರನ್ನು ಕಾಪಾಡಿದರೆ ಇಡಿ ಮನುಕುಲವನ್ನೇ ಸಂರಕ್ಷಿಸುತ್ತದೆ. ನೀರಿನ ಬಾಟಲನ್ನು ನಿರಂತರವಾಗಿ ಬಳಸುವುದರಿಂದ ಕ್ಯಾನ್ಸರ್‌ಗೆ ತುತ್ತಾಗುವ ಲಕ್ಷಣಗಳಿರುತ್ತವೆ. ಕಲುಷಿತ ನೀರು ಭವಿಷ್ಯಕ್ಕೆ ಮಾರಕ ಎನ್ನುವ ಜಾಗೃತಿ ಎಲ್ಲರಲ್ಲಿಯೂ ಮೂಡಬೇಕಿದೆ ಎಂದು ಹೇಳಿದರು. ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಗೌರವಾಧ್ಯಕ್ಷ ಹಾಗೂ ಕೃಷಿ ಇಲಾಖೆ ಜಂಟಿ ನಿರ್ದೇಶಕ ಬಿ.ಮಂಜುನಾಥ್, ಸಂಸ್ಥಾಪಕ ಸದಸ್ಯ ಕೆ.ಹೆಚ್.ಸೀತಾರಾಮರೆಡ್ಡಿ, ಡಾ.ವಿ.ವೀರಭದ್ರಯ್ಯ, ಎ.ಪಿ.ಎಂ.ಸಿ.ಕಾರ್ಯದರ್ಶಿ ಬಿ.ಎಲ್.ಕೃಷ್ಣಪ್ಪ ಎಂ.ಮಹಂತೇಶಪ್ಪ, ವೀರಣ್ಣ ಕೆ.ಕಮತರ, ಜಯರಾಮರೆಡ್ಡಿ, ಚಿದಾನಂದಪ್ಪ, ವಿ.ಸದಾಶಿವ, ಹನುಮಂತ ರಾಯರೆಡ್ಡಿ, ವೇದಿಕೆಯಲ್ಲಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T